# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 78 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 08–10–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 78 | RNI No: KARKAN/2023/88462 | Chitradurga | Date: 08-10-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಭಗವತಿಯ ಆರಾಧನೆ ಎಲ್ಲದಕ್ಕಿಂತಲೂ ಶ್ರೇಷ್ಠ: ಸ್ವಾಮೀಜಿ 2

ಶರಣ ಸಂಸ್ಕೃತಿ ಉತ್ಸವ–2024: ಜಯದೇವಕಪ್ ಸಮಾರೋಪ ಸಮಾರಂಭ 3

ನಿರ್ವಾಣ ಸಮಯದಲ್ಲು ಬುದ್ಧಂಗೂ ಕಾಡಿತ್ತು ಕಿಬ್ಬೊಟ್ಟೆ ನೋವು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪ್ರಬಂಧ ಸ್ಪರ್ಧೆ



» ಚಿತ್ರದುರ್ಗ

ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಅಂಗವಾಗಿ ಹೊಸದುರ್ಗ ಶಿಶು ಅಭಿವೃದ್ಧಿ ಯೋಜನಾ ಇಲಾಖೆ ವತಿಯಿಂದ ಹೊಸದುರ್ಗ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಅ.4 ರಂದು ಬಾಲ ಕಾರ್ಮಿಕ ಪದ್ಧತಿ ನಿಷೇಧ ಕಾಯ್ದೆ ಕುರಿತಾಗಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು. ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಲಾಷಾ ಪ್ರಬಂಧ ಸ್ಪರ್ಧೆಗಳು ಹೆಣ್ಣು ಮಕ್ಕಳಲ್ಲಿ ಆತ್ಮ ವಿಶ್ವಾಸ ಮತ್ತು ಬರವಣಿಗೆ ಜ್ಞಾನವನ್ನು ಹೆಚ್ಚಿಸುತ್ತದೆ. ಸ್ವತಂತ್ರವಾಗಿ ಬದುಕಿನ ನಿರ್ಧಾರಗಳನ್ನು ತೆಗೆದುಕೊಳ್ಳಲು ಸಹಕಾರಿಯಾಗುವುದು ಎಂದರು. ಈ ಪ್ರಬಂಧ ಸ್ಪರ್ಧೆಯಲ್ಲಿ ಟಿ.ಜೆ.ಪೂರ್ಣಿಮ, ವೈ.ಸಿ.ನೀತು, ಜೆ.ರಾಣಿ ಅನುಕ್ರಮವಾಗಿ ಪ್ರಥಮ ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿದರು. ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಅಭಿನಂದಿಸಲಾಯಿತು.

### ಅಡ್ಕರ್: ವಿವಿಧ ಯೋಜನೆಗಳಿಗೆ ಅರ್ಜಿ

» ಚಿತ್ರದುರ್ಗ

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2024–25ನೇ ಸಾಲಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅರ್ಹ ಚರ್ಮಕುಶಲಕರ್ಮಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 06 ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಿದ್ದು, ಅ.30ರೊಳಗೆ ಸೇವಾ ಸಿಂಧು ಪೋರ್ಟಲ್, ಕರ್ನಾಟಕ ಒನ್, ಗ್ರಾಮ ಒನ್‌ನ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅವಶ್ಯ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಜಿಲ್ಲಾ ಸಂಯೋಜಕರ ಕಚೇರಿಗೆ ಸಲ್ಲಿಸಬೇಕಾಗಿದೆ. ಕಾಯಕ ಸ್ಪೂರ್ತಿ ಯೋಜನೆ (ಮಹಿಳೆಯರಿಗೆ), ಪಾದುಕೆ ಕುಟೀರ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ, ಚರ್ಮಶಿಲ್ಪಿ ಯೋಜನೆ, ವಸತಿ ಕಾರ್ಯಾಗಾರ ಯೋಜನೆ, ಸ್ವಾವಲಂಬಿ/ಸಂಚಾರಿ ಮಾರಾಟ ಮಳಿಗೆ ಯೋಜನೆ, ನೇರಸಾಲ ಯೋಜನೆ ಹಾಗೂ ಕೌಶಲ್ಯ ಉನ್ನತೀಕರಣ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರ ಹತ್ತಿರದ ಲಿಡ್‌ಕರ್ ನಿಗಮ ಜಿಲ್ಲಾ ಸಂಯೋಜಕರು 94449181136 ಗೆ ಸಂಪರ್ಕಿಸಬಹುದು ಎಂದು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವ ಮುನ್ನವೇ ಮೃತಪಟ್ಟ ವ್ಯಕ್ತಿ

» ಚಳ್ಳಕೆರೆ

ನಗರದ ಸಾರ್ವಜನಿಕ ಆಸ್ಪತ್ರೆಗೆ ಅನಾರೋಗ್ಯ ನಿಮಿತ್ತ ಬಂದ ವ್ಯಕ್ತಿಯೊಬ್ಬ ಹಾಸಿಗೆಯ ಮೇಲೆ ಮಲಗಿ ಚಿಕಿತ್ಸೆ ಪಡೆಯುವ ಮುನ್ನವೇ ಮೃತಪಟ್ಟಿರುತ್ತಾನೆ. ಏಕಾಂಗಿಯಾಗಿ ಬಂದ ಈತನ ಬಗ್ಗೆ ಯಾವುದೇ ವಿವರ ಲಭ್ಯವಿಲ್ಲ. ಮೃತ ವ್ಯಕ್ತಿಯ ವಯಸ್ಸು ಅಂದಾಜು 35 ವರ್ಷ, ಕೋಲುಮುಖ, ಎಣ್ಣೆಗೆಂಪು ಬಣ, ಸಾದಾರಣ ಮೈಕಟ್ಟು, ಹಳದಿಶರ್ಟ್, ನೀಲಿ ಜೀನ್ಸ್‌ಪ್ಯಾಟ್ ಧರಿಸಿದ್ದಾನೆ. ಯಾರಿಗಾದರೂ ಈ ಬಗ್ಗೆ ಮಾಹಿತಿ ತಿಳಿದಲ್ಲಿ ಕೂಡಲೇ ಚಳ್ಳಕೆರೆ ಠಾಣಾ ಮೊ.94808 03151ಗೆ ಸಂಪರ್ಕಿಸಲು ಮನವಿ ಮಾಡಲಾಗಿದೆ.

## ಬಸವೇಶ ಮತ್ತು ಮುರುಘೇಶನ ಆಶೀರ್ವಾದದಿಂದ ಬಿಡುಗಡೆ: ಮುರುಘಾ ಶ್ರೀ

# ಮುರುಘಾ ಶರಣರಿಗೆ ಬಿಡುಗಡೆ ಭಾಗ್ಯ

» ನಮ್ಮಜನ ಸಮಾಚಾರ

ಚಿತ್ರದುರ್ಗ: ಪೋಕ್ಸೋ ಪ್ರಕರಣದಲ್ಲಿ ಜೈಲು ಪಾಲಾಗಿದ್ದ ಮುರುಘಾ ಮಠದ ಶ್ರೀ ಶಿವಮೂರ್ತಿ ಮುರುಘಾ ಶರಣರಿಗೆ ಚಿತ್ರದುರ್ಗದ ನ್ಯಾಯಾಲಯ ಜಾಮೀನು ಮಂಜೂರು ಮಾಡಿದ ಹಿನ್ನೆಲೆ ಶರಣರಿಗೆ ಬಿಡುಗಡೆ ಭಾಗ್ಯ ದೊರೆತಿದೆ.

ಮುರುಘಾ ಶ್ರೀಗಳು ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡಲು ಅವಕಾಶವಿಲ್ಲದ ಕಾರಣದಿಂದ ದಾವಣಗೆರೆ ಶಿವಯೋಗಿ ಮಂದಿರದಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಕಾರಗೃದಿಂದ ಹೊರ ಬಂದಂತಹ ಶಿವಮೂರ್ತಿ ಮುರುಘಾ ಶರಣರಿಗೆ ಕಾರಾಗೃಹ ಬಳಿ ಹಾರ ಹಾಕಿ ಭಕ್ತರು ಸ್ವಾಗತಿಸಿದರು. ದಾವಣಗೆರೆ ವಿರಕ್ತಮಠದ ಬಸವಪ್ರಭು ಶ್ರೀ ಸೇರಿ ಹಲವರು ಸಮಾಜದ ಮುಖಂಡರು ಸ್ವಾಮೀಜಿ ಸ್ವಾಗತಕ್ಕೆ ಆಗಮಿಸಿದ್ದರು.

ಬಸವಪ್ರಭುಶ್ರೀ, ಮಠದ ಬಸವಾದಿತ್ಯ ಇಬ್ಬರು ಸಹ ಮುರುಘಾ ಶರಣರ ಕಾಲಿಗೆ ನಮಸ್ಕರಿಸಿದರು. ಬಳಿಕ ಶ್ರೀಗಳು ಭಕ್ತರತ್ತ ಕೈ ಮುಗಿದು ದಾವಣಗೆರೆಗೆ ಪ್ರಮಾಣ ಬೆಳೆಸಿದರು.



**ಬಿಡುಗಡೆಗೆ ಕೋರ್ಟ್ ಆದೇಶ:** ಅಪ್ರಾಪ್ತರ ಮೇಲೆ ಲೈಂಗಿಕ ಕಿರುಕುಳದ ನೀಡಿದ ಆರೋಪ ಹಿನ್ನೆಲೆ ಪೋಕ್ಸೋ ಪ್ರಕರಣದಲ್ಲಿ ಜೈಲು ಪಾಲಾಗಿರುವ ಮುರುಘಾ ಮಠದ ಶ್ರೀ ಶಿವಮೂರ್ತಿ ಮುರುಘಾ ಶರಣರ ಬಿಡುಗಡೆಗೆ ಚಿತ್ರದುರ್ಗದ ನ್ಯಾಯಾಲಯ ಆದೇಶಿಸಿದೆ. ಇಂದು ವಿಚಾರಣೆ ನಡೆಸಿದ 2ನೇ ಅಪರ ಜಿಲ್ಲಾ & ಸತ್ರ ನ್ಯಾಯಾಲಯ ಸಾಕ್ಷ ವಿಚಾರಣೆ ಪೂರ್ಣಗೊಂಡ ಹಿನ್ನೆಲೆ ಬಿಡುಗಡೆಗೆ ಆದೇಶಿಸಿದೆ.

ಈ ಹಿಂದೆ ಹೈಕೋರ್ಟ್ ಜಾಮೀನು ನೀಡಿತ್ತು. ಆದರೆ ಮೈಸೂರಿನ ಒಡನಾಡಿ ಸಂಸ್ಥೆ ಸುಪ್ರೀಂ ಕೋರ್ಟ್ ಮೆಟ್ಟಲೇರಿದ ಕಾರಣ ಸಾಕ್ಷ ವಿಚಾರಣೆ ನಡೆಸುವವರೆಗೆ ಬಂಧನದಲ್ಲಿಡಲು ಸುಪ್ರೀಂ ಆದೇಶಿಸಿತ್ತು. ಹೀಗಾಗಿ ಸಂತ್ರಸ್ತೆಯರಿಬ್ಬರು ಸೇರಿ 13 ಮುಖ್ಯಸಾಕ್ಷಗಳವಿಚಾರಣೆಪೂರ್ಣಗೊಂಡ ಕಾರಣ ಶ್ರೀಗಳ ಬಿಡುಗಡೆಯಾಗಿದೆ. ಹೈಕೋರ್ಟ್ ನೀಡಿದ ಷರತ್ತುಬದ್ಧ ಜಾಮೀನಿನ ಅನ್ವಯ ಬಿಡುಗಡೆಯಾಗಿದೆ.



### ಮುರುಘೇಶನ ಆಶೀರ್ವಾದದಿಂದ ಬಿಡುಗಡೆ

ಬಿಡುಗಡೆ ಬಳಿಕ ಮಾಧ್ಯಮದ ಜೊತೆ ಮಾತನಾಡಿದ ಮುರುಘಾ ಶ್ರೀ, ನಮ್ಮ ವಿರುದ್ಧದ ಪ್ರಕರಣದ ಬಗ್ಗೆ ಕಾನೂನು ಹೋರಾಟ ನಡೆಸುತ್ತೇವೆ. ಸತ್ಯಕ್ಕೆ ಜಯ ಸಿಗುತ್ತದೆಂಬ ವಿಶ್ವಾಸ ನಮಗಿದೆ. ಬಸವೇಶ ಮತ್ತು ಮುರುಘೇಶನ ಆಶೀರ್ವಾದದಿಂದ. ಇಂದು ಬಂಧೀಖಾನೆಯಿಂದ ನಾನು ಬಿಡುಗಡೆಗೊಂಡಿದ್ದೇನೆ ಎಂದರು. ದಾವಣಗೆರೆಯ ಶಿವಯೋಗಿ ಆಶ್ರಮಕ್ಕೆ ಹೋಗುತ್ತೇವೆ. ಮುರುಘಾಮಠದಲ್ಲಿ ಶರಣ ಸಂಸ್ಕೃತಿ ಉತ್ಸವ ವೇಳೆ ಬಿಡುಗಡೆಗೊಂಡಿದ್ದೇವೆ. ಮುಂದೆ ವಿಚಾರ ಮಾಡಿ ಹೆಜ್ಜೆ ಹಾಕೋಣ, ಜೈಲಿನ ಅನುಭವದ ಬಗ್ಗೆ ಮುಂದೆ ಹೇಳುತ್ತೇವೆ. ಇದು ಸಕಾಲ ಅಲ್ಲ, ಮೌನಕ್ಕೆ ಜಾರುವ ಕಾಲವಿದು ಎಂದಷ್ಟೆ ಹೇಳಿದರು.

## ಆರೋಗ್ಯ ತಪಾಸಣಾ ಶಿಬಿರ ಸದ್ಬಳಕೆಗೆ ಸಲಹೆ

» ಪರಶುರಾಂಪುರ

ಉತ್ತಮಆಹಾರ ಪದ್ಧತಿ ಅಳವಡಿಸಿಕೊಳ್ಳುವುದರ ಜತೆಗೆ ದಿನನಿತ್ಯ ಒಂದಿಲ್ಲೊಂದುಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಆರೋಗ್ಯ ಕಾಪಾಡಿಕೊಳ್ಳಬಹುದುಎಂದುಗ್ರಾಪಂಅಧ್ಯಕ್ಷಆನಂದಕುಮಾರ್‌ಅಭಿಪ್ರಾಯಪಟ್ಟರು.

ಸಮೀಪದ ಚನ್ನಮ್ಮನಾಗತಿಹಳ್ಳಿಯಲ್ಲಿ ಗ್ರಾಮದ ಪ್ರಾಥಮಿಕಆರೋಗ್ಯಕೇಂದ್ರದಆವರಣದಲ್ಲಿ ಸೋಮವಾರಎಸ್‌ಎಸ್ ನಾರಾಯಣ ಹೆಲ್ತ್ ಸೂಪರ್ ಸ್ಪೆಷಾಲಿಟಿಆಸ್ಪತ್ರೆದಾವಣಗೆರೆ, ಬೆಂಗಳೂರಿನ ವೈದೇಹಿ ಆಸ್ಪತ್ರೆ ಹಾಗೂ ಸಿಡಿಲು ಸಂತ ಸ್ವಾಮಿ ವಿವೇಕಾನಂದ ಸಮಾಜ ಸೇವಾ ಸಂಸ್ಥೆ , ಆರೋಗ್ಯ ಇಲಾಖೆ ಮತ್ತುಗ್ರಾಮ ಪಂಚಾಯಿತಿ ಸಂಯುಕ್ತಆಶ್ರಯದಲ್ಲಿಉಚಿತಆರೋಗ್ಯ ಮತ್ತು ಹೃದಯತಪಾಸಣಾ ಶಿಬಿರದಲ್ಲಿ ಮಾತನಾಡಿ,ಪ್ರತಿದಿನಹೆಚ್ಚುನಡೆದಾಡುವಅಭ್ಯಾಸ ರೂಢಿಸಿಕೊಳ್ಳುವುದರಿಂದ ಆರೋಗ್ಯ ಉತ್ತಮಪಡಿಸಿಕೊಳ್ಳಬಹುದುಎಂದರು.

ಪಿಎಸ್‌ಐ ಮಂಜುನಾಥ್‌ಅರ್ಜುನ ಲಿಂಗಾರೆಡ್ಡಿ ಮಾತನಾಡಿ, ಇಂತಹಆರೋಗ್ಯ ಶಿಬಿರ ಹಳ್ಳಿಗಳಲ್ಲಿ ಹೆಚ್ಚು ನಡೆಯಬೇಕು. ಇದರಿಂದಗ್ರಾಮಾಂತರ ಪ್ರದೇಶದಜನಸಾಮಾನ್ಯರಿಗೆಆರೋಗ್ಯದ ಬಗ್ಗೆ ಅರಿವು ಮೂಡಿಸಲು ಸಾಧ್ಯಎಂದರು.




ಸಿಡಿಲ ಸಂತ ಸ್ವಾಮಿ ವಿವೇಕಾನಂದ ಸಮಾಜ ಸೇವಾ ಸಂಸ್ಥೆಯಅಧ್ಯಕ್ಷಚಲ್ಮೇಶ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ಪ್ರದೇಶದಜನರಆರೋಗ್ಯಕಾಪಾಡುವ ಹಿತದೃಷ್ಟಿಯಿಂದ ಈ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ.ಪ್ರತಿಯೊಬ್ಬರೂಆರೋಗ್ಯಕಾಪಾಡಿಕೊಂಡಜೀವನ ಶೈಲಿಸಾಧ್ಯವಾದಷ್ಟು ಬದಲಾವಣೆ ಮಾಡಿಕೊಳ್ಳುವುದು ಉತ್ತಮಎಂದರು.

ಈ ವೇಳೆಯಲ್ಲಿ ಗ್ರಾಪಂ ಸದಸ್ಯರು, ಹಿರಿಯರು, ಮುಖಂಡರು,ಎಸ್‌ಎಸ್ ನಾರಾಯಣ ಹೆಲ್ತ್ ಸೂಪರ್ ಸ್ಪೆಷಾಲಿಟಿಆಸ್ಪತ್ರೆ , ವೈದೇಹಿ ಆಸ್ಪತ್ರೆ ಹಾಗೂ ಪ್ರಾಥಮಿಕಆರೋಗ್ಯಕೇಂದ್ರದ ವೈದ್ಯಾಧಿಕಾರಿಗಳ ಜತೆ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಗ್ರಾಮೀಣ ಭಾಗದ ಗ್ರಂಥಾಲಯಗಳಿಗೆ ಡಿಜಿಟಲ್ ಸ್ಪರ್ಶ: ಅಬ್ದುಲ್ ನಜೀರ್



**ಚಳ್ಳಕೆರೆ:** ಗ್ರಾಮೀಣ ಭಾಗದ ಜನರಿಗೆ ಹೆಚ್ಚು ಉಪಯುಕ್ತವಾಗಲಿ ಹಾಗೂ ಸರ್ಕಾರ ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ಆಗುತ್ತಿರುವ ಅನೇಕ ಬದಲಾವಣೆಗಳನ್ನು ತಿಳಿಯಲು ಡಿಜಿಟಲ್ ಸಾಕ್ಷರತೆ ಮತ್ತು ಮಕ್ಕಳ ಸ್ನೇಹಿ ಗ್ರಂಥಾಲಯವನ್ನು ಆರಂಭಿಸಿದ್ದು ಗ್ರಾಮೀಣ ಭಾಗದ ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಅರವು ಕೇಂದ್ರಗಳ ಮೇಲ್ವಿಚಾರಕ ಅಬ್ದುಲ್ ನಜೀರ್‌ಸಾಬ್ ತಿಳಿಸಿದರು.ಅವರು, ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ಗ್ರಾಮೀಣ ಭಾಗದ ಗ್ರಂಥಪಾಲಕರಿಗೆ ಹಮ್ಮಿಕೊಂಡಿದ್ದ ಎರಡು ದಿನಗಳ ಅರವು, ಡಿಜಿಟಲ್ ಸಾಕ್ಷರತೆ ಮತ್ತು ಮಕ್ಕಳ ಸ್ನೇಹಿ ಗ್ರಂಥಾಲಯ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ವಿಶೇಷವೆಂದರೆ ಇತ್ತೀಚಿನ ವರ್ಷಗಳಲ್ಲಿ ಸರ್ಕಾರ ಗ್ರಂಥಾಲಯಗಳ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡುತ್ತಾ ಬಂದಿದೆ.


ಪುಟ ↘ 2


### ಪ್ರಮುಖ ಸುದ್ದಿ

# ಮೊಬೈಲ್ ಹಾವಳಿಯಲ್ಲಿ ಛಾಯಾಗ್ರಹಣ ನೇಪಥ್ಯಕ್ಕೆ

» ಚಳ್ಳಕೆರೆ

ಆಧುನಿಕ ಮೊಬೈಲ್ ಹಾವಳಿಯಲ್ಲಿ ಛಾಯಾಗ್ರಹಣ ನೇಪಥ್ಯಕ್ಕೆ ಸರಿಯುತ್ತಿರುವುದು ಆತಂಕಾರಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಹೇಳಿದರು

ಛಾಯಾಗ್ರಾಹಕರ ವೃತ್ತಿಯ ಬಗ್ಗೆ ಸಮಾಜದಲ್ಲಿ ವಿಶೇಷ ಗೌರವಿದೆ. ಪ್ರಸ್ತುತ ಘಟನೆಯೂ ಸೇರಿದಂತೆ ಹಳೇತಲೆಮಾರಿನ ಹಲವಾರು ಸಂಗತಿಗಳನ್ನು ನಾವು ಪೋಟೋ ನೋಡುವ ಮೂಲಕ ಮೆಲಕುಹಾಕಬಹುದು. ಛಾಯಾಗ್ರಾಹಕರು ತಮ್ಮ ವೃತ್ತಿಯನ್ನು ವಿಶೇಷವಾಗಿ ಗೌರವಿಸಿ, ಪ್ರೀತಿಸಬೇಕಲ್ಲದೆ, ಎಲ್ಲರೂ ಆತ್ಮವಿಶ್ವಾಸದಿಂದ ಬದುಕಬೇಕು. ನೀವು ಮಾಡುವ ವೃತ್ತಿ ನಿಮಗೆ ವಿಶೇಷ ಸ್ಥಾನಮಾನವನ್ನು ತಂದುಕೊಡಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ತಿಳಿಸಿದರು.

ಅವರು, ನಗರದ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಛಾಯಾಗ್ರಾಹಕರ ಸಂಘದ 185ನೇ ವಿಶ್ವಛಾಯಾಗ್ರಹಣ ದಿನಾಚರಣೆ ಹಾಗೂ ಛಾಯಾಕುಟುಂಬ ಮಿಲನ ಕಾರ್ಯಕ್ರಮವನ್ನು ಕ್ಯಾಮರ ಕ್ಲಿಕ್ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಛಾಯಾಗ್ರಾಹಕರ ವೃತ್ತಿಯ ಬಗ್ಗೆ ಮಾಹಿತಿ ಪಡೆದಿರುವೆ. ಬರುವ ಆದಾಯದಲ್ಲೇ ಸಂತೃಪ್ತಿಯ ಬದುಕನ್ನು ನಡೆಸುವುದರಲ್ಲಿ ಛಾಯಾಗ್ರಾಹಕರು ಸದಾಮುಂದು. ತಮ್ಮ ಯಾವುದೇ ಸಮಸ್ಯೆ ಇದ್ದಲ್ಲಿ ಬಗೆಹರಿಸುವ ಭರವಸೆ ನೀಡಿದರು.



ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನೇತಾಜಿಪ್ರಸನ್ನ, ಇತ್ತೀಚಿನ ದಿನಗಳಲ್ಲಿ ಛಾಯಾಗ್ರಹಣ ತನ್ನದೇಯಾದ ವಿಶೇಷತೆಯನ್ನು ಹೊಂದಿದೆ. ಚಳ್ಳಕೆರೆ ನಗರದಲ್ಲಿ ಸುಮಾರು 100ಕ್ಕೂ ಹೆಚ್ಚು ಕುಟುಂಬಗಳು ಈ ವೃತ್ತಿ ಅವಲಂಬಿಸಿವೆ. ಅನೇಕ ಸಮಸ್ಯೆಗಳ ನಡುವೆಯೂ ಛಾಯಾಗ್ರಾಹಕರು ತಮ್ಮ ವೃತ್ತಿ ಬದುಕು ಮುಂದುವರೆಸಿಕೊಂಡು ಹೋಗಿದ್ದಾರೆ. ಛಾಯಾಗ್ರಾಹಕರ ಸಂಘದ ಚಟುವಟಿಕೆಗಳನ್ನು ಕ್ರಿಯಾಶೀಲವಾಗಿ ನಡೆಸಲು ನಗರದಲ್ಲಿ ನಿವೇಶನ ನೀಡುವುದಲ್ಲದೆ, ಛಾಯಾಭವನ ನಿರ್ಮಿಸಿಕೊಡುವಂತೆ ಮನವಿ ಮಾಡಿದರು. ರಾಜ್ಯ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನಾಗೇಶ್ ಮಾತನಾಡಿ, ಛಾಯಾಗ್ರಹಣ ವೃತ್ತಿ ವಿಶೇಷ ಮಹತ್ವವನ್ನು ಪಡೆದುಕೊಂಡಿದೆ. ಕಳೆದ ಹಲವಾರು ವರ್ಷಗಳ ಹಿಂದೆ ನಡೆದ ವಿಷಯವನ್ನು ಛಾಯಾಗ್ರಹಣದ ಮೂಲಕ ಸೆರೆಹಿಡಿದು ಜನರಿಗೆ ತಲುಪಿಸುವ ಕೆಲಸವನ್ನು ಮಾಡಲಾಗುತ್ತಿದೆ. ವಿಶೇಷವಾಗಿ ಈ ವೃತ್ತಿಯನ್ನು ಎಲ್ಲರೂ ಗೌರವಿಸುತ್ತಾರೆ, ಛಾಯಾಗ್ರಾಹಕರ ಸಮಸ್ಯೆನಿವಾರಣೆ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು, ಕ್ಷೇತ್ರದ ಶಾಸಕರು ಗಮನಹರಿಸುವಂತೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ರಾಜ್ಯ ಕಾರ್ಯದರ್ಶಿ ಮುರುಳಿ, ಉಮಾಶಂಕರ್, ಜಿಲ್ಲಾ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಸೈಯದ್ ರಹಮತ್‌ವುಲ್ಲಾ, ಪ್ರಧಾನ ಕಾರ್ಯದರ್ಶಿ ನಾಗಣ್ಣ, ಖಜಾಂಚಿ ಕುಮಾರ್, ಹಿರಿಯ ಛಾಯಾಗ್ರಾಹಕರಾದ ಪಿ.ರವೀಂದ್ರನಾಥ, ಭವಾನಿಶಂಕರ ಮುಂತಾದವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಯಾವ ವ್ಯಕ್ತಿ ವೃತ್ತಿಯನ್ನು ಗೌರವಿಸುತ್ತಾನೋ ಅವನು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ..ಛಾಯಾಗ್ರಾಹಕರ ಯಾವುದೇ ಸಮಸ್ಯೆಗಳಿದ್ದರೂ ಅದನ್ನು ಪರಸ್ಪರ ಚರ್ಚಿಸಿ ಬಗೆಹರಿಸುವ ಭರವಸೆಯನ್ನು ನೀಡಿದರು. ಉಪಾಧ್ಯಕ್ಷ ವೈ.ಜಯಕುಮಾರ್, ಪ್ರಧಾನಕಾರ್ಯದರ್ಶಿ ಟಿ.ಆರ್.ಚಂದ್ರಶೇಖರ್, ಖಜಾಂಚಿ ಅಜಯ್, ಸಂಘಟನಾ ಕಾರ್ಯದರ್ಶಿ ಪಿಎಸ್‌ಆರ್ ಪಟೇಲ್, ನಿರ್ದೇಶಕರಾದ ಕೆ.ಮೃತ್ಯುಂಜಯ, ಶ್ರೀನಿವಾಸಲು, ರಘು, ಭಾನುವೀರೇಶ್, ಅಶೋಕ್, ವೆಂಕಟೇಶ್, ನಾಗರಾಜಗೌಡ, ಚೌಧರಿ,ಶಶಿ, ಶಿವು ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವಾಸುದೇವ ಪತ್ರಿಕಾ ಮಾಧ್ಯಮದ ಕಾರ್ಯಾಧ್ಯಕ್ಷ

» ದಾವಣಗೆರೆ

ರಾಷ್ಟ್ರೀಯ ಅಹಿಂದ ಒಕ್ಕೂಟದ ರಾಜ್ಯ ಕಾರ್ಯಕಾರಣಿ ಸಮಿತಿಯ ಒಮ್ಮತದಿಂದ ತೀರ್ಮಾನಿಸಿ ಡಾ. ಬಿ. ವಾಸುದೇವ ಅವರನ್ನು ರಾಜ್ಯ ಪತ್ರಿಕಾ ಮಾಧ್ಯಮದ ಕಾರ್ಯಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ರಾಷ್ಟ್ರೀಯ ಅಹಿಂದ ಒಕ್ಕೂಟ ಮುತ್ತಣ್ಣ ಶಿವಳಿ, ರಾಷ್ಟ್ರೀಯ ಆಹಿಂದ ಒಕ್ಕೂಟದ ಪ್ರೊ. ಬೀರಲಿಂಗೇಶ್ವರ ಪೂಜಾರಿ, ರಾಜ್ಯ ಕಾರ್ಯಧ್ಯಕ್ಷರಾದ ಗುರನಗೌಡ ಎಸ್ ಪಾಟೀಲ್, ಬಿ. ಶಿವಣ್ಣ ಮೈಸೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಎರಡನೇ ಹಂತದ ಅಹಿಂದ ನಾಯಕರನ್ನು ಗುರುತಿಸುವುದು, ಮತ್ತು ಅವರನ್ನು ರಾಜಕೀಯವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ, ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಮತ್ತು ವೈಯಕ್ತಿಕವಾಗಿ ಬೆಳೆಯಲು ವೇದಿಕೆ ಕಲಿಸುವುದರ ಮೂಲಕ ಅವರನ್ನು ಪ್ರೋತ್ಸಾಹಿಸುವುದು ಈ ಒಕ್ಕೂಟದ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

### ಅ.10 ರಂದು ಜಿಲ್ಲಾ ಸಮನ್ವಯ ಸಮಿತಿ ಸಭೆ

» ದಾವಣಗೆರೆ

ರಾಷ್ಟ್ರೀಯ ಕುಷ್ಠರೋಗ ಕುಷ್ಠರೋಗ ಅಭಿಯಾನ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇಯಲ್ಲಿ ಹಾಗೂ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 10 ರಂದು ಮಧ್ಯಾಹ್ನ 3 ಗಂಟೆಗೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ; ಷಣ್ಮುಖಪ್ಪ ತಿಳಿಸಿದ್ದಾರೆ.

### ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಅಕ್ಟೋಬರ್ 9 ರಂದು ಬೆಳಗ್ಗೆ 11 ರಿಂದ 1 ಗಂಟೆಯವರೆಗೆ ಹೊನ್ನಾಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರಿಸುವರು.ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿರುವ ಕುರಿತ ದೂರುಗಳನ್ನು ಸಲ್ಲಿಸಬಹುದು.

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸೇವಾಸಿಂಧು ಪೋರ್ಟಲ್ ಮೂಲಕ ಅಕ್ಟೋಬರ್.30 ರೊಳಗಾಗಿ ಸಲ್ಲಿಸಿ, ಸಲ್ಲಿಸಿದ ಅರ್ಜಿ ಮತ್ತು ದಾಖಲೆಗಳನ್ನು ಜಿಲ್ಲಾ ಸಂಯೋಜಕರು, ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ನಿಗಮ, ದಾವಣಗೆರೆ ಇಲ್ಲಿಗೆ ಸಲ್ಲಿಸಲು ಹಾಗೂ ಮೊ.ಸಂ:9845801361, 8105976617 ನ್ನು ಸಂಪರ್ಕಿಸಲು ತಿಳಿಸಲಾಗಿದೆ.

### ಕಟ್ಟಡ ಪರವಾನಗಿ ಪಡೆಯಲು ಸೂಚನೆ

» ದಾವಣಗೆರೆ

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಪರವಾನಗಿ ಪಡೆಯದೇ ಕಟ್ಟಡ ನಿರ್ಮಾಣವಾಗುತ್ತಿರುವುದು ಕಂಡು ಬಂದಿದ್ದು, ಅನಧಿಕೃತ, ಅಕ್ರಮ ಕಟ್ಟಡ ನಿರ್ಮಾಣ ಕಾಮಗಾರಿ ಕಂಡುಬಂದಲ್ಲಿ ಕಟ್ಟಡ ನಿರ್ಮಾಣದ ಸಾಮಾಗ್ರಿಗಳನ್ನು ವಶಪಡಿಸಿಕೊಂಡು ಕೆ.ಎಂ.ಸಿ ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ. ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಆನ್‌ಲೈನ್ ತಂತ್ರಾಂಶದಲ್ಲಿ ಕಟ್ಟಡ ಪರವಾನಿಗೆ ಅರ್ಜಿಗಳನ್ನು ಸ್ವೀಕರಿಸಿ ನಿಯಮಾನುಸಾರವಾಗಿ ಕಟ್ಟಡ ಪರವಾನಿಗೆ ನೀಡಲು ಕ್ರಮವಹಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪಾಲಿಕೆಯ ನಗರ ಯೋಜನಾ ಶಾಖೆ ಸಂಪರ್ಕಿಸಲು ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ಪಾಲಿಕೆ ವ್ಯಾಪ್ತಿಯಲ್ಲಿ ವಾಜಪೇಯಿ ನಗರ ವಸತಿ ಯೋಜನೆ ಹಾಗೂ ಡಾ; ಅಂಬೇಡ್ಕರ್ ನಿವಾಸ್ ಯೋಜನೆಯಡಿ ಮನೆ ನಿರ್ಮಿಸಿಕೊಳ್ಳುವ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ದಾವಣಗೆರೆ ಉತ್ತರ ಮತ್ತು ದಕ್ಷಿಣ ಕ್ಷೇತ್ರ ವ್ಯಾಪ್ತಿಯಲ್ಲಿರುವ ಶಿಥಿಲವಾಗಿರುವ ಮನೆಗಳು ಹಾಗೂ ಖಾಲಿ ನಿವೇಶನ ಹೊಂದಿರುವವರು ಅರ್ಜಿ ಸಲ್ಲಿಸಬಹುದು. ವಾಜಪೇಯಿ ವಸತಿ ಯೋಜನೆಯಡಿ ಸಾಮಾನ್ಯದಡಿ 177 ಮನೆಗಳು ಲಭ್ಯವಿದ್ದು ಸಹಾಯಧನವಾಗಿ ರೂ.2.70 ಲಕ್ಷ ಮತ್ತು ಡಾ; ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ಪರಿಶಿಷ್ಟ ಪಂಗಡದ 18 ಮನೆಗಳು ಲಭ್ಯವಿದ್ದು ರೂ.3.50 ಲಕ್ಷ ಸಹಾಯಧನ ನೀಡಲಾಗುತ್ತದೆ. ಆಸಕ್ತರು ಗಂಡ, ಹೆಂಡತಿ ಇಬ್ಬರ ಆಧಾರ್, ರೇಷನ್ ಕಾರ್ಡ್, ಮತದಾರರ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪತ್ರ, ಬ್ಯಾಂಕ್ ಪಾಸ್ ಬುಕ್, ಚಾಲ್ತಿ ಇ-ಸ್ವತ್ತು, ಇಸಿ ನಕಲು, 2 ಭಾವಚಿತ್ರ ಪ್ರತಿಯೊಂದಿಗೆ ಪಾಲಿಕೆಯಲ್ಲಿ ಅರ್ಜಿ ಸಲ್ಲಿಸಲು ಆಯುಕ್ತರು ತಿಳಿಸಿದ್ದಾರೆ.

# ಭಗವತಿಯ ಆರಾಧನೆ ಎಲ್ಲದಕ್ಕಿಂತಲೂ ಶ್ರೇಷ್ಠ

» ಚಿತ್ರದುರ್ಗ





ಭಗವತಿಯನ್ನು ಯಾರು ಆರಾಧನೆ ಮಾಡುತ್ತಾರೊ, ಅವರಿಗೆ ಏನ್ನೇಲಾ ಸಂಪತ್ತು, ಆರೋಗ್ಯ ಐಶ್ವರ್ಯ, ಧನ ಕನಕಗಳು ಲಭ್ಯವಾಗುತ್ತವೆ, ನಿಶ್ಚಲವಾದ ಮನಸ್ಸಿನಿಂದ ದೇವಿಯ ಆರಾಧನೆಯನ್ನು ಮಾಡುವುದರ ಮೂಲಕ ಆಕೆಯನ್ನು ಬಲಿಸಿಕೊಳ್ಳಬಹುದಾಗಿದೆ ಎಂದು ನಗರದ ಶ್ರೀ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿನ ಶ್ರೀ ಕಬೀರಾನಂದಾಶ್ರಮದ ಶ್ರೀ ಭಗವತಿ ಬಗಳಾಂಬಿಕಾದೇವಿಯ ದೇವಸ್ಥಾನದ ಆವರಣದಲ್ಲಿ ಸೋಮವಾರ ನಡೆದ ಚಂಡಿಕಾ ಹೋಮದ ಪೂರ್ಣಾಹುತಿಯನ್ನು ನೀಡಿ ಮಾತನಾಡಿದ ಶ್ರೀಗಳು, ಭಗವತಿಯ ಆರಾಧನೆ ಎಲ್ಲದಕ್ಕಿಂತಲೂ ಶ್ರೇಷ್ಠವಾದದು, ಇಂದಿನ ದಿನಮಾನದಲ್ಲಿ ತಪ್ಪುಗಳನ್ನು ಮಾಡದವರು ಯಾರೂ ಇಲ್ಲ, ಈ ತಪ್ಪುಗಳನ್ನು ಮನ್ನಿಸಿ ನಮ್ಮನ್ನು ಸರಿ ದಾರಿಗೆ ಕರೆದುಕೊಂಡು ಹೋಗುವವಳು ತಾಯಿಯಾಗಿದ್ದಾಳೆ. ಅವಳು ಜಗತ್ತಿಗೆ ಶಕ್ತಿಯಾಗಿದ್ದಾಳೆ. ಶಕ್ತಿಗೆ ಹೆಣ್ಣು ರೂಪವನ್ನು ನೀಡುವುದರ ಮೂಲಕ ಭಗವಂತ ಸೃಷ್ಟಿ ಮಾಡಿದ್ದಾನೆ. ಮನಸ್ಸಿಗೆ ಯಾವುದೇ ಲಿಂಗ ಬೇಧ ಇಲ್ಲವಾಗಿದೆ. ಈ ಹಿನ್ನಲೆಯಲ್ಲಿ ಭಗವತಿಗೆ ರೂಪವನ್ನು ನೀಡಬೇಕಿತ್ತು ಈ ಹಿನ್ನಲೆಯಲ್ಲಿ ಹೆಣ್ಣು ರೂಪವನ್ನು ನೀಡಿ ಆರಾಧನೆಯನ್ನು ಮಾಡಲಾಗುತ್ತಿದೆ ಎಂದರು. ವಿಜಯದಶಮಿಯಿಂದ ಕಳೆದ ಐದು ದಿನಗಳ ಕಾಲ ನಿರ್ಭಿಘ್ನವಾಗಿ ಚಂಡಿಕಾಯಾಗವನ್ನು ನಡೆಸಲಾಗುತ್ತಿದ್ದು ಇಂದು ಅದನ್ನು ಪೂರ್ಣ ಮಾಡಲಾಗಿದೆ. ಚೈತನ್ಯಕ್ಕೆ ಯಾವುದೆ ಲಿಂಗದ ಭೇದ ಇಲ್ಲ ಅದು ಅಗೋಚರವಾಗಿ ಎಲ್ಲರನ್ನು ಕಾಪಾಡುವ ಶಕ್ತಿಯಾಗಿದೆ. ಅದನ್ನು ಆಹ್ವಾನಿಸಿ ಪೂಜೆ ಮಾಡುವುದರ ಮೂಲಕ ಭಗವಂತನ ಆರಾಧನೆಯನ್ನು ಮಾಡಬೇಕಿದೆ. ಈ ನವರಾತ್ರಿ ಸಮಯದಲ್ಲಿ ಭಗವತಿಯ ಆರಾಧನೆ ಅತಿ ಶ್ರೇಷ್ಠವಾಗಿದೆ. ನಮ್ಮ ಸಂಸ್ಕೃತ ಪಾಠ ಶಾಲೆಯಲ್ಲಿ ಶಿಕ್ಷಕರಾಗಿ ಹಾಗೂ ನಮ್ಮ ಮಠದ ಅರ್ಚಕರಾಗಿ ಸುಬ್ರಾರಾಯ್ ಭಟ್ಟರು ಕೆಲಸವನ್ನು ಮಾಡಿದ್ದಾರೆ ಎಂದು ಶ್ರೀಗಳು ತಿಳಿಸಿದರು. ಒಬ್ಬ ಒಳ್ಳೆಯ ಪರೋಹಿತ, ಒಳ್ಳೆಯ ಶಿಕ್ಷಕ ಹಾಗೂ ಮಠಕ್ಕೆ ಒಳ್ಳೆಯ ಸ್ವಾಮಿ ಸಿಗುವುದು ಪುಣ್ಯದ ಕೆಲಸವಾಗಿದೆ. ಪುರೋಹಿತ ಎಂದರೆ ಪುರದ ಹಿತವನ್ನು ಕಾಯುವವನು ಜನರಿಗೆ ಹಿತವನ್ನು ಭಯಸುವವನು ಪರೋಹಿತ ಎನ್ನಲಾಗುತ್ತಿದೆ ಆದರೆ ಇಂದಿನ ದಿನಮಾನದಲ್ಲಿ ಇದಕ್ಕೆ ಬೇರೆ ರೀತಿಯ ಅರ್ಥವನ್ನು ನೀಡಲಾಗುತ್ತಿದೆ ಎಂದ ಶ್ರೀಗಳು, ನಮ್ಮ ಆಶ್ರಮದಲ್ಲಿ ಹಲವಾರು ವರ್ಷಗಳಿಂದ ದೇವಿಯ ಆರಾಧನೆ ಕಾರ್ಯ ನಡೆಯುತ್ತಿದೆ. ನಾನು 7ನೇ ತರಗತಿಯಿಂದಲೂ ದೇವಿಯ ಪುರಾಣವನ್ನು ಅಭ್ಯಾಸ ಮಾಡುತ್ತಾ ಬಂದಿದ್ದೇನೆ, ಎಂದ ಸ್ವಾಮೀಜಿಯವರು, ನಮ್ಮ ನಾಡಿನಲ್ಲಿ ಹಲವಾರು ಜನತೆ ದೇವಿಯನ್ನು ಆರಾಧನೆ ಮಾಡುವುದರ ಮೂಲಕ ಆಕೆಯ ಕೃಪಾಕಟಾಕ್ಷಕ್ಕೆ ಬಳಗಾಗಿದ್ದರು ಇದರಿಂದ ಹಲವಾರು ಪವಾಡಗಳನ್ನು ಸಹಾ ಮಾಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಅರ್ಚಕರಾಗಿ ಸುಬ್ರಾರಾಯ್ ಭಟ್ಟರು ಚಂಡಿಕಾ ಯಾಗವನ್ನು ನೇರವೇರಿಸಿ ಕೊಟ್ಟರು. ಈ ಸಮಯದಲ್ಲಿ ಗಣಪತಿ ಶಾಸ್ತ್ರಿ, ತಿಪ್ಪೇಸ್ವಾಮಿ, ಸೇರಿದಂತೆ ಇತರರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ತಾಯಿ ಶ್ರೀ ಭಗವತಿ ಬಗಳಾಂಬಿಕಾದೇವಿಗೆ ನವರಾತ್ರಿಯ ಅಂಗವಾಗಿ ವಿಶೇಷವಾದ ಅಲಂಕಾರವನ್ನು ಮಾಡಲಾಗಿತ್ತು.

# ವಿದ್ಯಾರ್ಥಿಗಳಿಗೆ ಸಹಾಯದನ ವಿತರಣೆ

» ಚಿತ್ರದುರ್ಗ



ಚಿತ್ರದುರ್ಗ ಜಿಲ್ಲೆಯ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಹಾಯ ಮಾಡುವುದು ನಮ್ಮ ಸಂಸ್ಥೆಯ ಗುರಿಯಾಗಿದೆ. ಇಲ್ಲಿ ಸಹಾಯ ಪಡೆದವರು ಮುಂದಿನ ದಿನದಲ್ಲಿ ಬೇರೆಯವರಿಗೆ ಸಹಾಯವನ್ನು ಮಾಡುವುದರ ಮೂಲಕ ಸಮಾಜದ ಋಣವನ್ನು ತೀರಿಸುವಂತೆ ಆಶಾಕಿರಣ ಸಂಸ್ಥೆಯ ಆಧ್ಯಕ್ಷರಾದ ಗೀರೀಶ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿಬಾಲಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಆಶಾಕಿರಣ ಸಂಸ್ಥೆಯವತಿಯಿಂದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಹಾಯಧನ ವಿತರಣಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಆಶಾಕಿರಣ ಸಂಸ್ಥೆಯು ಸರ್ಕಾರದ ಯಾವುದೇ ಸಹಾಯವಿಲ್ಲದೆ ನಗರದ 13 ಜನ ಸೇರಿ ನಿರ್ಮಾಣ ಮಾಡಿದ ಸಂಸ್ಥೆಯಾಗಿದೆ. ನಾವು ಸಮಾಜದಿಂದ ಸಹಾಯವನ್ನು ಪಡೆದಿದ್ದೇವೆ ನಾವು ಸಮಾಜಕ್ಕೆ ಏನಾದರೂ ಸಹಾಯವನ್ನು ಮಾಡಬೇಕೆಂಬ ಆಲೋಚನೆಯಲ್ಲಿ ಈ ಸಂಸ್ಥೆಯನ್ನು ಹುಟ್ಟು ಹಾಕಲಾಯಿತು. ಇಲ್ಲಿ ಜಿಲ್ಲೆಯ ಬಡ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಅವರು ಪದವಿ ಪಡೆಯುವವರೆಗೂ ಸಹಾ ಸಹಾಯವನ್ನು ಮಾಡಲಾಗುವುದು ಇದುವರೆವೆಗೂ ಸುಮಾರು 800 ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಹಾಯ ಮಾಡಲಾಗಿದೆ ಎಂದರು.

ಎಸ್.ಎಸ್.ಎಲ್.ಸಿ. ಮುಗಿದ ನಂತರ ಹಲವಾರು ವಿದ್ಯಾರ್ಥಿಗಳಿಗೆ ಓದಲು ಆರ್ಥಿಕ ನೆರವಿಲ್ಲದೆ ಕಷ್ಟ ಪಡುತ್ತಾರೆ, ಇಂತಹವರನ್ನು ಗುರುತಿಸಿ ಅವರಿಗೆ ಸಹಾಯವನ್ನು ಮಾಡಲಾಗುತ್ತದೆ. ನಾವು ನೀಡುವ ಸಹಾಯಧನವನ್ನು ಯಾವುದೇ ಜಾತಿ, ಧರ್ಮ, ಲಿಂಗ ಬೇಧ, ಜನಾಂಗದ ಲೆಕ್ಕಾಚಾರ ಇಲ್ಲದೆ ಅರ್ಜಿಯನ್ನು ಸಲ್ಲಿಸಿದವರ ಆರ್ಥಿಕ ಪರಿಸ್ಥಿತಿಯನ್ನು ಪರೀಶೀಲಿಸಿ ಸಹಾಯಧನವನ್ನು ನೀಡಲಾಗುವುದು. ಪ್ರತಿಯೊಂದು ವರ್ಷದ ಪರೀಕ್ಷೆಯಲ್ಲಿ ಶೇ.70 ರಷ್ಟು ಫಲಿತಾಂಶ ಬಂದರೆ ಮಾತ್ರ ಮುಂದಿನ ವರ್ಷದ ಸಹಾಯಧನವನ್ನು ಪಡೆಯಲು ಅರ್ಹರಿರುತ್ತಾರೆ. ಇದ್ದಲ್ಲದೆ ವಿದ್ಯಾರ್ಥಿಗಳಿಗೆವರ್ಷಕ್ಕೊಮ್ಮೆಬ್ರಿಡ್ಜ್‌ಕೋರ್ಸ್‌ನ್ನು ಹಮ್ಮಿಕೊಳ್ಳಲಾಗುವುದು ಇದರಲ್ಲಿ ವಿದ್ಯಾರ್ಥಿಗಳಿಗೆ ಉಪಯಕ್ತವಾಗುವ ಸಂಪನ್ಮೂಲ ವ್ಯಕ್ತಿಗಳನ್ನು ಕರೆಯಿಸಿ 4 ದಿನಗಳ ಕಾಲ ವಸತಿ ಸಹಿತ ತರಬೇತಿಯನ್ನು ನೀಡುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮ ವಿಶ್ವಾಸವನ್ನು ಮೂಡಿಸಲಾಗುವುದೆಂದರು.

ಆಶಾಕಿರಣ ಸಂಸ್ಥೆಯ ನಿರ್ದೇಶಕರಾದ ಮಹೇಶ್ ಮಾತನಾಡಿ, ಈ ಸಂಸ್ಥೆ ಸ್ಥಾಪನೆಯಲ್ಲಿ ನಮ್ಮ ಯಾವುದೆ ನಿರ್ದೇಶಕರ ಸ್ವಾರ್ಥ ಇಲ್ಲ ಎಲ್ಲರು ಸಹಾ ನಿಸ್ವಾರ್ಥವಾಗಿ ಬಡ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರಗತಿಗೆ ಸಹಾಯವನ್ನು ಮಾಡುವ ಉದ್ದೇಶದಿಂದ ಕಳೆದ 13 ವರ್ಷದಿಂದ ಈ ಕೆಲಸವನ್ನು ಮಾಡಲಾಗುತ್ತಿದೆ. ನಾವು ಕೂಡುವಂತ ಸಹಾಯಧನವನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳಿ, ಶಿಕ್ಷಣ ಮಾತ್ರವಲ್ಲದೆ ನಿಮ್ಮ ಇತರೆ ಸಮಸ್ಯೆಗಳನ್ನು ಸಹಾ ನಮ್ಮ ಬಳಿ ಹೇಳಿದರೆ ಅದಕ್ಕೆ ಪರಿಹಾರವನ್ನು ನೀಡುವ ಕಾರ್ಯವನ್ನು ಮಾಡಲಾಗುವುದೆಂದರು.

ಮತ್ತೋರ್ವ ನಿರ್ದೇಶಕರಾದ ಮಧು ಪ್ರಸಾದ್ ಮಾತನಾಡಿ, ನಮ್ಮ ಸಂಸ್ಥೆ ಚನ್ನಾಗಿ ಓದುವವರಿಗೆ ಸಹಾಯವನ್ನು ಮಾಡುವುದರ ಮೂಲಕ ಪ್ರೋತ್ಸಾಹವನ್ನು ನೀಡಲಿದೆ. ನೀವೇಲ್ಲಾ ಆಶಾಕಿರಣದ ಕುಟುಂಬ ಇದ್ದ ಹಾಗೇ, ಸಮಯಕ್ಕೆ ಹೆಚ್ಚಿನ ವಹತ್ವವನ್ನು ನೀಡಿ ವಿನಾಕಾರಣ ಕಾಲಹರಣ ಮಾಡಬೇಡಿ, ತಮ್ಮ ಪಾಲಿನ ಕರ್ತವ್ಯವನ್ನು ಜವಾಬ್ದಾರಿಯುತವಾಗಿ ನಿಭಾಯಿಸಿ ಇದರಿಂದ ಮುಂದೆ ನಿಮ್ಮ ಪ್ರಗತಿಯನ್ನು ಕಾಣಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಮೃಣಾಲಿನಿ, ಎಂ.ಪಿ.ಗುರುರಾಜ್ ಮಾತನಾಡಿ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಸಲಹೆಯನ್ನು ನೀಡಿದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ.ಯಿಂದ ಹಿಡಿದು ಪದವಿಯವರೆಗೂ ಸುಮಾರು 65 ವಿದ್ಯಾರ್ಥಿಗಳಿಗೆ ಸುಮಾರು 8 ಲಕ್ಷ ರೂ.ಗಳನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಆಶಾಕಿರಣ ಸಂಸ್ಥೆಯ ನಿರ್ದೇಶಕರುಗಳಾದ ಕೇಶವಮೂರ್ತಿ, ಪ್ರವೀಣ್, ಪ್ರಸನ್ನ ಕುಮಾರ್, ನಾಗರಾಜ್, ರವಿಶಂಕರ್, ಹೇಮಂತ ರೆಡ್ಡಿ, ರಮೇಶ್, ಭಾನುಕಿರಣ್, ದಿವಾಕರ, ಸಿದಾರ್ಥ ವೆಂಕಟೇಶ್ ಉಪಸ್ಥಿತರಿದ್ದರು. ಶ್ರೀಮತಿ ಮಾಧುರಿ ಮಧುಪ್ರಸಾದ್ ಪ್ರಾರ್ಥಿಸಿದರೆ, ಮಹೇಶ್ ಸ್ವಾಗತಿಸಿದರು.

## ಶರಣ ಸಂಸ್ಕೃತಿ ಉತ್ಸವ 2024 ನಸಾಬ್ ಚಿತ್ರ ಪೋಸ್ಟರ್ ಬಿಡುಗಡೆ




» ಚಿತ್ರದುರ್ಗ

ಕೆ. ಕಿಶೋರ್ ಕುಮಾರ್ ನಿರ್ದೇಶನದ ಕೀರ್ತಿಕುಮಾರ್ ನಾಯ್ಕ ನಟಿಸಿರುವ ಇದೇ ತಿಂಗಳ 25 ರಂದು ಬಿಡುಗಡೆಗೊಳ್ಳಲಿರುವ ನಸಾಬ್ ಚಿತ್ರದ ಪೋಸ್ಟರ್ ಗಳನ್ನು ಚಿತ್ರದುರ್ಗದಲ್ಲಿ ಶರಣ ಸಂಸ್ಕೃತಿ ಉತ್ಸವ 2024 ಆರಂಭವಾದ ಕಾರ್ಯಕ್ರಮದಲ್ಲಿ ಬಿಡುಗಡೆಗೊಳಿಸಲಾಯಿತು. ಚಿತ್ರದುರ್ಗ ಶ್ರೀ ಸಿದ್ಧರಾಮೇಶ್ವರ ಸಂಸ್ಥಾನದ ಶ್ರೀ ಜಗದ್ಗುರು ಇಮ್ಮಡಿ ಸಿದ್ಧರಾಮ ಮಹಾಸ್ವಾಮಿಗಳು, ಶ್ರೀ ಮಾದಾರ ಚೆನ್ನಯ್ಯ ಗುರುಪೀಠದ ಶ್ರೀ ಜಗದ್ಗುರು ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು, ಶ್ರೀ ವಿರಕ್ತಮಠದ ಶ್ರೀ ನಿ.ಪ್ರ.ಸ್ವ. ಮಹಾಂತರುದ್ರೇಶ್ವರ ಸ್ವಾಮಿಗಳು, ದಾವಣಗೆರೆ ವಿರಕ್ತಮಠದ ಡಾ.ಬಸವಪ್ರಭು ಸ್ವಾಮಿಗಳು, ಕಾಂಗ್ರೆಸ್ ಮುಖಂಡ ಶ್ರೀ ಸೈಯದ್ ಅನೀಸ್, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಶ್ರೀ ಜಿ ಎಸ್ ಮಂಜುನಾಥ್ ಮೊದಲಾದವರು ಪೋಸ್ಟರ್ ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಕೆ.ಡಿ.ಪಿ.ಸದಸ್ಯರಾದ ಶ್ರೀ ಕೆ.ಸಿ.ನಾಗರಾಜ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಶ್ರೀ ಎಂ ಕೆ ತಾಜ್ ಪೀರ್, ನಿವೃತ್ತ ಡಿಡಿಪಿಐ ಶ್ರೀ ರವಿಶಂಕರ್ ರೆಡ್ಡಿ, ಲಿಡ್ಕರ್ ಮಾಜಿ ಛೇರ್ಮನ್ ಶ್ರೀ ಓ ಶಂಕರ್, ಸಿರಾಜ್, ಖುದ್ದುಸ್, ನಾಗಶೇಖರ, ಶ್ರೀರಾಮ್, ಶ್ರೀಮತಿ ಅಂಜು ಉಪಸ್ಥಿತರಿದ್ದರು.




ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳವರ 150 ನೇ ಜಯಂತ್ಯುತ್ಸವ ಹಾಗೂ ಶರಣ ಸಂಸ್ಕೃತಿ ಉತ್ಸವ-2024 ಅಂಗವಾಗಿ ಶ್ರೀಮರುಘಾಮಠದಲ್ಲಿ ಬಸವೇಶ್ವರ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆ ವತಿಯಿಂದ ಆಯೋಜಿಸಿರುವ ಉಚಿತ ಆರೋಗ್ಯಮೇಳಕ್ಕೆ ಚಾಲನೆ ನೀಡಲಾಯಿತು.

## ಗ್ರಾಮೀಣ ಭಾಗದ ಗ್ರಂಥಾಲಯಗಳಿಗೆ ಡಿಜಿಟಲ್ ಸ್ಪರ್ಶ: ಅಬ್ದುಲ್ ನಜೀರ್

ಮೊದಲ ಪುಟದಿಂದ: ರಾಜ್ಯ ಹಾಗೂ ರಾಷ್ಟ್ರದಲ್ಲಿ ಆಗುವ ಹಲವಾರು ವಿಷಯಗಳನ್ನು ಸುಲಭವಾಗಿ ಗ್ರಾಮೀಣ ಜನರು ತಿಳಿದುಕೊಳ್ಳುವಂತಹ ಅರಿವು ಕಾರ್ಯಕ್ರಮವಾಗಿದ್ದು, ಇದರ ಯಶಸ್ಸಿಗೆ ಎಲ್ಲರೂ ಸಹಕರಿಸಬೇಕೆಂದರು. ಪ್ರಾಸ್ತಾವಿಕವಾಗಿ ಮಾತಾಡಿದ ಸಹಾಯಕ ಕಾರ್ಯನಿರ್ವಹಣಾಧಿಕಾರಿ ಸಂತೋಷ್‌ಕುಮಾರ್, ಗ್ರಾಮೀಣ ಭಾಗದ ಗ್ರಂಥಾಲಯಗಳ ಸುಧಾರಣೆಗೆ ಗ್ರಾಮೀಣಾಭಿವೃದ್ಧಿ ಇಲಾಖೆ ಮೊದಲ ಆದ್ಯತೆ ನೀಡುತ್ತಾ ಬಂದಿದೆ. ಗ್ರಾಮೀಣ ಭಾಗದ ಜನರಿಗೆ ಒಂದೇ ಜಾಗದಲ್ಲಿ ಹಲವಾರು ವಿಷಯ ತಿಳಿಯುವ ವ್ಯವಸ್ಥೆಯನ್ನು ಈ ಮೂಲಕ ಸರ್ಕಾರ ಕೈಗೊಂಡಿದೆ ಎಂದರು. ಕಾರ್ಯಕ್ರಮದಲ್ಲಿ ಸಂಪತ್‌ಕುಮಾರ್, ನೋಡಲ್ ಡಿಟಿಸಿ ಮಂಜುನಾಥ, ರೀನಾ, ಗಾದ್ರಿಪಾಲಯ್ಯ, ನಿರಂಜನಮೂರ್ತಿ, ಸುಲೋಚನ, ಲಕ್ಷ್ಮಿದೇವಿ, ಗಿರಿಜಮ್ಮ, ಜ್ಯೋತಿ, ರಾಧಮ್ಮ, ಸೋಮಗುದ್ದುರಮೇಶ್, ಜಾಜೂರು ಚಲ್ಮೇಶ್, ದೋಣೆಹಳ್ಳಿತಿಪ್ಪೇಸ್ವಾಮಿ, ಜಯಮ್ಮ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಕಾಲುವೇಹಳ್ಳಿ ಶ್ರೀನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಮಂಡಲಪೂಜಾ ಕಾರ್ಯಕ್ರಮ ಯಶಸ್ವಿ ಮುಕ್ತಾಯ

» ಚಳ್ಳಕೆರೆ





ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದ ಶ್ರೀನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಳಸ ಪ್ರತಿಷ್ಠಾಪನೆಯಾದ ಹಿನ್ನೆಲೆಯಲ್ಲಿ ಮಂಡಲ ಪೂಜಾ ಕಾರ್ಯಕ್ರಮವನ್ನು ನಡೆಸಲಾಯಿತು. ಕಳೆದ ತಿಂಗಳಷ್ಟೇ ನೀಲಕಂಠೇಶ್ವರಸ್ವಾಮಿ ದೇವಸ್ಥಾನದ ಗೋಪುರ ಕಳಸ ಪ್ರತಿಷ್ಠಾಪನೆ ನಡೆದಿದ್ದು, ಸೂರ್ಯೋದಯಕ್ಕೂ ಮುಂಚೆಯೇ 48 ದಿನಗಳ ಕಾಲ ವಿವಿಧ ಕುಟುಂಬಗಳಿಂದ ಪೂಜೆ, ಅಭಿಷೇಕ, ಎಲೆಪೂಜೆ ಮುಂತಾದ ದೇವತಾಕಾರ್ಯಗಳನ್ನು ನಡೆಸಿದರು.

ಮಂಡಲಪೂಜಾ ಮಹೋತ್ಸವ ಕಾರ್ಯಕ್ರಮ ಅಂತ್ಯಗೊಂಡು ಅಂತಿಮ ದಿನವಾದ 49ನೇ ದಿನ ಗ್ರಾಮದ ಎಲ್ಲಾ ಭಕ್ತರು ಹಾಗೂ ದೇವಸ್ಥಾನದ ಆಡಳಿತ ಮಂಡಳಿ ಸಹಕಾರದೊಂದಿಗೆ ಗಂಗಾಪೂಜೆ, ಮಹಾಗಣಪತಿಪೂಜೆ, ಪಂಚಕಳಸಪೂಜೆ, ದುದ್ರಾಬಿಷೇಕ, ಗಣಹೋಮ, ಮೃತ್ಯುಂಜಯಹೋಮ, ನವಗ್ರಹಪೂಜೆ, ರುದ್ರಹೋಮ, ಜಯಾದಿಹೋಮ ಮುಂತಾದ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ವಿಶೇಷವೆಂದರೆ ಗ್ರಾಮಸ್ಥರೆಲ್ಲಾ ಸೇರಿ ಏಕಕಾಲದಲ್ಲೇ ಗ್ರಾಮದಲ್ಲಿ ನೆಲೆಸಿರುವ ಕಾಳಿಕಾದೇವಿ, ಆಂಜನೇಯಸ್ವಾಮಿ, ಪಾಲನಾಯಕಸ್ವಾಮಿ ದೇವಾಲಯಗಳಲ್ಲಿ ಮಹಾಮಂಗಳಾರತಿ, ಪೂಜಾ ಕಾರ್ಯಕ್ರಮಗಳನ್ನು ನಡೆಸಲಾಯಿತು.

ವಿದ್ವಾನ್ ಡಾ.ಪಂಡಿತ್ ವೀರೇಶ್ ಹಿರೇಮಠ ಮಾತನಾಡಿ, ಗ್ರಾಮದ ಜನರ ಕಲ್ಯಾಣಕ್ಕಾಗಿ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ನೀಲಕಂಠೇಶ್ವರಸ್ವಾಮಿ ದೇವಾಲಯದಲ್ಲಿ 48 ದಿನಗಳ ವಿಶೇಷ ಪೂಜೆಯನ್ನು ಹಮ್ಮಿಕೊಂಡು ಸಮೃದ್ಧ ಮಳೆ, ಬೆಳೆಗೆ ಶ್ರೀಸ್ವಾಮಿಯನ್ನು ಪ್ರಾರ್ಥಿಸಿದೆ. ಗ್ರಾಮೀಣ ಭಾಗದ ಜನರಿಗೆ ದೇವರ ಮೇಲೆ ಇರುವ ಅಪಾರವಾದ ಭಕ್ತಿ, ಗೌರವ, ನಂಬಿಕೆ ಕಂಡು ಸಂತೋಷವಾಗಿದೆ. ಪ್ರತಿಯೊಬ್ಬರೂ ಶ್ರದ್ಧಾ,ಭಕ್ತಿಯಿಂದ ಪೂಜಾ ಕಾರ್ಯವನ್ನು ನಡೆಸಿಕೊಟ್ಟಿದ್ಧಾರೆ. ಎಲ್ಲಿ ದೇವರ ಮಂಗಳಕಾರ್ಯ ನಡೆಯುತ್ತವೋ ಅಲ್ಲಿ ಶಾಂತಿ, ನೆಮ್ಮದಿ ನೆಲೆಸುತ್ತದೆ ಎಂದರು.

ಗ್ರಾಮದ ಮುಖಂಡರಾದ ರೇಣುಕಾಸ್ವಾಮಿ, ಜಯಪಾಲಯ್ಯ, ಕೆ.ಪಿ.ಭೂತಯ್ಯ, ಜಾಜೂರುಹನುಮಂತಪ್ಪ, ರಂಗಸ್ವಾಮಿ, ಶ್ರೀನಿವಾಸ್, ಡಿ.ಆರ್.ತಿಮ್ಮಣ್ಣ, ಕೆ.ಓ.ಪಾಲಯ್ಯ, ಮುಂತಾದವರು ಪೂಜಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕೆ ಅರ್ಜಿ

» ದಾವಣಗೆರೆ

ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ಕೋರ್ಸುಗಳಾದ ದ್ವಿತೀಯ ಪಿ.ಯು.ಸಿ. ಮತ್ತು ಪದವಿ ,ಸ್ನಾತಕೋತ್ತರ ಪದವಿ ವಾರ್ಷಿಕ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಅಸಕ್ತ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖಾ ತಿತಿತಿ.ತಿ.ಇಚಿಡಿ.ಟಿಛಿ.ಟಿ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಿ. ಅರ್ಜಿ ಹಾಕಿದ ಪ್ರತಿಯೊಂದಿಗೆ ಅಗತ್ಯ ದಾಖಲೆಗಳನ್ನು ಪ್ರಾಂಶುಪಾಲರ ದೃಢೀಕರಣದೊಂದಿಗೆ ಆಯಾ ತಾಲ್ಲೂಕಿನ ವಿದ್ಯಾರ್ಥಿಗಳು ತಮ್ಮ ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು ಜಂಟಿ ನಿರ್ದೇಶಕಾರಾದ ನಾಗರಾಜ್ ತಿಳಿಸಿದ್ದಾರೆ.

### ಎಸ್.ಎಸ್.ಎಲ್.ಸಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಅರ್ಜಿ

» ದಾವಣಗೆರೆ

ಸಮಾಜ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಅಸಕ್ತ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖಾ www.sw.kar.nic.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಿ. ಅರ್ಜಿ ಹಾಕಿದ ಪ್ರತಿಯೊಂದಿಗೆ ಅಗತ್ಯ ದಾಖಲೆಗಳನ್ನು ದೃಢೀಕರಣದೊಂದಿಗೆ ಆಯಾ ತಾಲ್ಲೂಕಿನ ಇಲಾಖೆ ಕಚೇರಿಗೆ ಸಲ್ಲಿಸಲು ಜಂಟಿ ನಿರ್ದೇಶಕ ನಾಗರಾಜ್ ತಿಳಿಸಿದ್ದಾರೆ.

### ದಾವಣಗೆರೆ ಖಾಸಗಿ ಬಸ್ ನಿಲ್ದಾಣ ಸಾರ್ವಜನಿಕರ ಬಳಕೆಗೆ ಮುಕ್ತ: ಶಾಸಕ

» ದಾವಣಗೆರೆ

ದಾವಣಗೆರೆ ಖಾಸಗಿ ಬಸ್ ನಿಲ್ದಾಣ ಸಾರ್ವಜನಿಕರ ಬಳಕೆಗೆ ಮುಕ್ತವಾಗಿದ್ದು ಈ ಬಸ್ ನಿಲ್ದಾಣವು ಸುಸಜ್ಜಿತ ಹಾಗೂ ಹಲವು ಸೌಲಭ್ಯಗಳನ್ನು ಹೊಂದಿದೆ ಎಂದು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ತಿಳಿಸಿದರು. ಅವರು (07) ರಂದು ಪಿ.ಬಿ ರಸ್ತೆಯಲ್ಲಿನ ಡಾ. ಶಾಮನೂರು ಶಿವಶಂಕರಪ್ಪ ಖಾಸಗಿ ಬಸ್ ನಿಲ್ದಾಣದಲ್ಲಿ ಬಸ್ಸುಗಳ ಕಾರ್ಯಾರಂಭ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಈ ಬಸ್ ನಿಲ್ದಾಣ ಸ್ಮಾರ್ಟ್ ಸಿಟಿ' ಯೋಜನೆಯಡಿ 20 ಕೋಟಿ ವೆಚ್ಚದಲ್ಲಿ ಸಿದ್ದಗೊಂಡು, ಈಚೆಗಷ್ಟೇ ಸಾರ್ವಜನಿಕರ ಬಳಕೆಗೆ ಮುಕ್ತವಾಗಿರುವ ಈ ಬಸ್ ನಿಲ್ದಾಣವು ಸುಸಜ್ಜಿತವಾಗಿದ್ದು, ಹತ್ತಾರು ಸೌಲಭ್ಯಗಳನ್ನು ಹೊಂದಿದೆ. 84 ಮಳಿಗೆ ಹಾಗೂ ಏಕಾಲಕ್ಕೆ 16 ಬಸ್ ನಿಲ್ಲಿಸಬಹುದಾಗಿದೆ. 200 ದ್ವಿಚಕ್ರ ವಾಹನ ನಿಲುಗಡೆಗೆ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಈ ಸುಸಜ್ಜಿತ ಬಸ್ ನಿಲ್ದಾಣವನ್ನು ದಾವಣಗೆರೆ ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಯಿತು. ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್, ಹರಿಹರ ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಉಪಮೇಯರ್ ಸೋಗಿ ಶಾಂತಕುಮಾರ್, ಖಾಸಗಿ ಬಸ್ ಮಾಲೀಕರ ಸಂಘದ ಅಧ್ಯಕ್ಷರಾದ ಮಲ್ಲೇಶಪ್ಪ, ಖಾಸಗಿ ಬಸ್ ಏಜೆಂಟರ ಸಂಘದ ಅಧ್ಯಕ್ಷರಾದ ಉಮೇಶ್‌ರಾವ್ ಸಾಳಂಕಿ, ಹಾಗೂ ದಾವಣಗೆರೆ ಜಿಲ್ಲಾ ಖಾಸಗಿ ಬಸ್ ಮಾಲೀಕರ ಸಂಘದ ಪದಾಧಿಕಾರಿಗಳು, ಖಾಸಗಿ ಬಸ್ ಏಜೆಂಟ್ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

### ಗಂಭೀರ ಕಾಯಿಲೆ ಆರೈಕೆ: ಪ್ರೊತ್ಸಾಹ ಧನಕ್ಕೆ ಅರ್ಜಿ

» ಚಿತ್ರದುರ್ಗ

ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟ್ರೋಫಿ, ಪಾರ್ಕಿನ್‌ಸನ್ಸ್ ಮತ್ತು ಮಲ್ಟಿಪಲ್ ಸ್ಕೊರೊಸಿಸ್ ನಂತಹ ಗಂಭೀರ ಕಾಯಿಲೆಯಿಂದ ಬಳಲುತ್ತಿರುವವರನ್ನು ಆರೈಕೆ ಮಾಡುತ್ತಿರುವರಿಗೆ, ಪ್ರತಿ ಮಾಹೆ ರೂ.1000/– ಪ್ರೋತ್ಸಾಹ ಧನ ನೀಡಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ವತಿಯಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯ ಲಾಭ ಪಡೆಯಲು ವಿಕಲಚೇತನರ ಆಧಾರ ಹಾಗೂ ವಿಶೇಷ ಗುರುತಿನ ಚೀಟಿ, ವೈದ್ಯಕೀಯ, ಜಾತಿ, ಆದಾಯ, ನಿವಾಸಿ ಧೃಡೀಕರಣ ಪ್ರಮಾಣ ಪತ್ರ, ಇತ್ತೀಚಿನ ಭಾವಚಿತ್ರ ಹಾಗೂ ಆರೈಕೆದಾರರ ಬ್ಯಾಂಕ್ ಖಾತೆ ಪುಸ್ತಕದ ಪ್ರತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ನಮೂನೆ www.dwdsc.kar.nic.in ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ, ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮೂರು 9742725576 ಹಾಗೂ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ–08194–235284 ಸಂಪರ್ಕಿಸಿ.

ಶ್ರೀ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣಸಂಸ್ಕೃತಿ ಉತ್ಸವ –2024

# ಜಯದೇವಕಪ್ ಸಮಾರೋಪ ಸಮಾರಂಭ

» ಚಿತ್ರದುರ್ಗ

ಹಳೆಯ ಮಾಧ್ಯಮಿಕ ಶಾಲಾ ಆವರಣದಲ್ಲಿ ಜಯದೇವಕಪ್ ಸಮಾರೋಪ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಅಥಣಿಗಚ್ಚಿಮಠದ ಶ್ರೀ ಶಿಬಸವ ಗುರುಮುರುಘರಾಜೇಂದ್ರ ಸ್ವಾಮಿಗಳು ಮಾತನಾಡಿ, ಜಯದೇವ ಜಗದ್ಗುರುಗಳು ಧಾರ್ಮಿಕ ಕ್ಷೇತ್ರಕ್ಕೆ ಒಂದು ಸ್ಪೂರ್ತಿಯ ಸೆಲೆ ಇದ್ದಂತೆ. 1934ರಲ್ಲಿ ಕೊಲ್ಲಾಪುರದ ನಗರದಲ್ಲಿ ಷಾಹು ಮಹಾರಾಜರು 15 ಎಕರೆ ಜಾಗವನ್ನು ಕೊಟ್ಟರು. ಮಹಾರಾಷ್ಟ್ರದ ಈ ಕ್ಷೇತ್ರದಲ್ಲಿ ಒಂದು ದೊಡ್ಡ ಮಠವನ್ನು ಕಟ್ಟಿಸಿದರು. ಪ್ರತಿ ವರ್ಷ ಜಮುರಾ ಕಪ್ ನಡೆಯುತ್ತಿತ್ತು. ಅದನ್ನು ಜಯದೇವ ಗುರುಗಳ 150ನೇ ಜನ್ಮದಿನದ ಅಂಗವಾಗಿ ಜಯದೇವ ಕಪ್ ಎಂದು ಮಾಡಲಾಗಿದೆ. ಕ್ರೀಡೆಯು ಮಾನಸಿಕ ನೆಮ್ಮದಿ ಮತ್ತು ದೈಹಿಕವಾದ ಆರೋಗ್ಯವನ್ನು ನೀಡುತ್ತದೆ. ಆದ ಕಾರಣ ಕ್ರೀಡೆಯನ್ನು ನೀವುಗಳು ಅಳವಡಿಸಿಕೊಳ್ಳಿ. ಚಿತ್ರದುರ್ಗ ನಗರವು ಸಾಂಸ್ಕೃತಿಕ ನಗರಿ. ಅದೇ ನಿಟ್ಟಿನಲ್ಲಿ ಸಾಂಸ್ಕೃತಿಕ ನೆಲೆಗಟ್ಟಿನಲ್ಲಿ ಸಾಗಲಿ. ಮುರುಘಾಮಠ ಸರ್ವ ಜನಾಂಗದ ಶಾಂತಿಯ ತೋಟವಾಗಿದೆ ಎಂದು ತಿಳಿಸಿದರು.

ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿಗಳು ಮಾತನಾಡಿ, ಜಯದೇವ ಶ್ರೀಗಳ ಕೃಪೆಯಿಂದ ಇಲ್ಲಿ ಸೇರಿದ್ದೇವೆ. ಶ್ರೀಗಳು ಎಲ್ಲಾಕ್ಷೇತ್ರದಲ್ಲೂ ಸೇವೆ ಸಲ್ಲಿಸಿದ್ದಾರೆ. ಶ್ರೀಗಳ ಬಗ್ಗೆ ಹೇಳಬೇಕೆಂದರೆ ಸೊಲ್ಲಾಪುರದ ಮಲ್ಲಯ್ಯನವರು ಜಯದೇವ ಸ್ವಾಮಿಗಳ ಕಾರ್ಯವೈಖರಿಯನ್ನು ತಿಳಿದು ಶ್ರೀಗಳ ದರ್ಶನ ಪಡೆಯಲು ದೀಡ್ ನಮಸ್ಕಾರವನ್ನು ಮಾಡುತ್ತ 550 ಕಿಲೋಮೀಟರ್ ದೂರದಿಂದ ಬರುತ್ತಾರೆ. ಮಲ್ಲಯ್ಯನ ನಿಷ್ಠೆಯನ್ನು ಕಂಡು ಆತನ ಪತ್ನಿಯು ಆತನಿಗೆ ಸಹಕರಿಸಿಕೊಂಡು



ಆತನ ಜೊತೆ ಆಕೆಯೂ ಹಿಂಬಾಲಿಸುತ್ತಾಳೆ. ಇದನ್ನು ಅರಿತ ಜಯದೇವ ಶ್ರೀಗಳು ಹಾಗೂ ಜಯವಿಭವ ಜಗದ್ಗುರುಗಳು ಲಕ್ಷ್ಮೀಶ್ವರದಲ್ಲಿ ಮಲ್ಲಯ್ಯನ ಭೇಟಿ ಮಾಡಿ ದರ್ಶನ ಭಾಗ್ಯ ನೀಡುತ್ತಾರೆ. ಸೊಲ್ಲಾಪುರದ ಮಲ್ಲಯ್ಯನಂತಹ ಶಿಷ್ಯರು ಆದರ್ಶಪ್ರಾಯರಾಗುತ್ತಾರೆ. ಜಯದೇವ ಶ್ರೀಗಳಿಗೆ ಕೇವಲ ಚಿತ್ರದುರ್ಗದ ಜನತೆ ಮಾತ್ರ ಭಕ್ತರಾಗಿರಲಿಲ್ಲ. ನಾಡಿನ ಮೂಲೆ ಮೂಲೆಯಿಂದ ಮತ್ತು ಹೊರರಾಜ್ಯಗಳಲ್ಲೂ ಭಕ್ತರನ್ನು ಹೊಂದಿದ್ದರು ಎಂದು ತಿಳಿಸಿದರು.

ಶಾಸಕರಾದ ಶ್ರೀ ಕೆ.ಸಿ.ವೀರೇಂದ್ರ (ಪಪ್ಪಿ) ಮಾತನಾಡಿ, ಈ ನಾಡಿನಿಂದ ಸರ್ಕಾರಿ ಶಾಲೆಯ ಮಕ್ಕಳು ಸೇರಿದಂತೆ ಈ ಬಾರಿಯ ಶರಣ ಸಂಸ್ಕೃತಿ ಉತ್ಸವದ ಕ್ರೀಡಾ ಜಾತ್ರೆಯಲ್ಲಿ 1500 ಕ್ರೀಡಾಪಟುಗಳು ಭಾಗವಹಿಸಿದ್ದು ಅದರ ಯಶಸ್ಸಿನ ಸಾಕ್ಷಿಯಾಗಿದೆ ಈ ಜಯದೇವ ಕಪ್. ಶ್ರೀಮಠದ ಸೇವಕನಾಗಿ ತಾನು ತನ್ನನ್ನು ತಾನು ತೊಡಗಿಸಿಕೊಳ್ಳುವುದಾಗಿ ತಿಳಿಸಿದರು.

ಉದ್ಯಮಿ, ಬಿ.ಜೆ.ಪಿ. ಮುಖಂಡ ಶ್ರೀ ಜಿ.ಎಸ್.ಅನೀತ್ ಮಾತನಾಡಿ, ಮಧ್ಯ ಕರ್ನಾಟಕದ ದಸರಾ ಹಬ್ಬ ಈ ಶರಣ ಸಂಸ್ಕೃತಿ ಉತ್ಸವ. ಶರಣಸಂಸ್ಕೃತಿ ಉತ್ಸವವು ಸರ್ವೋದಯದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಶ್ರೀಮುರುಘಾಮಠವು ಸಮಾಜಮುಖಿ ಕಾರ್ಯ ಮಾಡುತ್ತಾ ಬಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಾದಾರ ಚೆನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿಗಳು, ಶ್ರೀ ರುದ್ರಮುನಿ ಮಹಾಸ್ವಾಮಿಗಳು, ದ.ಸಂ.ಸ.ರಾಜ್ಯಾಧ್ಯಕ್ಷ ಶ್ರೀ ಮಹಾಲಿಂಗಪ್ಪ ಕುಂಚಿಗನಾಳ್, ನಗರಸಭೆ ಅಧ್ಯಕ್ಷೆ ಶ್ರೀಮತಿ ಸುಮಿತಾ ರಾಘವೇಂದ್ರ, ನಗರಸಭೆ ಆಯುಕ್ತೆ ಶ್ರೀಮತಿ ರೇಣುಕ, ವಸಂತ ನರಸಾಪುರದ ಕೈಗಾರಿಕೋದ್ಯಮಿಗಳ ಸಂಘದ ಅಧ್ಯಕ್ಷ ಡಾ.ಸಿ.ವಿ.ಹರೀಶ್, ಕುರುಬರ ಸಂಘದ ಅಧ್ಯಕ್ಷ ಶ್ರೀರಾಮ್ ಶ್ರೀ ಎಂ.ಕೆ.ತಾಜ್‌ಪೀರ್, ಶ್ರೀಸೈಯದ್ ಅನೀಸ್, ಶ್ರೀ ಮಂಜುನಾಥ್(ದಾಳಿಂಬೆ), ಶ್ರೀ ಮಹಾಲಿಂಗಪ್ಪ, ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ಶ್ರೀ ಬಳ್ಳಾರಿ ಹನುಮಂತಪ್ಪ, , ಡಿಡಿಪಿಐ ಶ್ರೀ ಮಂಜುನಾಥ್, ಡಿವೈಎಸ್‌ಪಿ ಶ್ರೀ ದಿನಕರ್, ಬಿಇಓ ಶ್ರೀ ನಾಗಭೂಷಣ್, ಶ್ರೀ ಸುಮಿತ್ರಾ ನಾಗೇಂದ್ರರೆಡ್ಡಿ, ಶ್ರೀಮತಿ ವೀಣಾ ಸುರೇಶ್‌ಬಾಬು, ಶ್ರೀಮತಿ ರುದ್ರಾಣಿ ಗಂಗಾಧರ್, ಶ್ರೀ ಸಂಜುಕುಮಾರ್, ಸಿಂಡಿಕೇಟ್ ಸದಸ್ಯ ಶ್ರೀ ಶಾಂತಕುಮಾರ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಮಣಿಪಾಲ್ ಆಸ್ಪತ್ರೆಯ ಖ್ಯಾತ ವೈದ್ಯ ಡಾ.ಕಾರ್ತಿಕ್‌ರಾವ್, ಕೊರೊನ ವಾರಿಯರ್ ಶ್ರೀ ವಿ.ಪುನಿತ್‌ರವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಮುರಾ ಕಲಾವಿದರು ಪ್ರಾರ್ಥಿಸಿ, ಮುರುಗೇಶ್ ನಿರೂಪಿಸಿ, ರವಿಶಂಕರ್ ರೆಡ್ಡಿ ಸ್ವಾಗತಿಸಿದರು.

ಸಾಂಸ್ಕೃತಿಕ ಸಂಭ್ರಮದಲ್ಲಿ ಅಂತರಾಷ್ಟ್ರೀಯ ಜಾನಪದ ಗಾಯಕಿ ಶ್ರೀಮತಿ ಸವಿತಕ್ಕ ಅರ್ಪಿಸುವ ಸವಿತಕ್ಕನ ಹಳ್ಳಿ ಬ್ಯಾಂಡ್‌ನಲ್ಲಿ ಜನಪದ, ತತ್ತ್ವಪದ ರಂಗಗೀತೆಗಳನ್ನು ಹಾಡಿದರು.

**ಜಮುರಾ ಕಪ್ ಪಂದ್ಯಾವಳಿಗಳ ಫಲಿತಾಂಶ:** ಬಾಲಕಿಯರ ವಿಭಾಗದ ಕಬಡ್ಡಿ, ಮಲ್ಲೂರಹಟ್ಟಿ ಪ್ರಥಮ, ಚಳ್ಳಕೆರೆ ದೀತಿಯ, ಚಿತ್ರದುರ್ಗ ತೃತೀಯ ಹಾಗು ಚಿತ್ರದುರ್ಗ ತಾಲ್ಲೂಕು ಚತುರ್ಥ ಸ್ಥಾನ ಉತ್ತಮ ದಾಳಿಗಾರ್ತಿ ಭೂಮಿಕಾ ಚಳ್ಳಕೆರೆ, ಉತ್ತಮ ಹಿಡಿತಗಾರ್ತಿ ಮೇಘನಾ.ಎಂ ಚಿತ್ರದುರ್ಗ, ಸರ್ವೋತ್ತಮ ಆಟಗಾರ್ತಿ ಪ್ರಮಿಳಾ ಮಲ್ಲೂರಹಟ್ಟಿ.ಬಾಲಕರ ವಿಭಾಗದ ಕಬಡ್ಡಿ, ಮೊಳಕಾಲ್ಮೂರು ಪ್ರಥಮ, ಚಿತ್ರದುರ್ಗ ದ್ವಿತೀಯ, ಚಳ್ಳಕೆರೆ ತೃತೀಯ ಹಾಗು ತಾಲ್ಲೂಕು ಚತುರ್ಥ ಸ್ಥಾನ ಉತ್ತಮ ದಾಳಿಗಾರ . , ಉತ್ತಮ ಹಿಡಿತಗಾರ .. ..., ಸರ್ವೋತ್ತಮ ಆಟಗಾರನಾಗಿ .ಬಾಲಕಿಯರ ವಿಭಾಗ ಹ್ಯಾಂಡ್ ಬಾಲ್ ಚಳ್ಳಕೆರೆ –ಪ್ರಥಮ, ದ್ವಿತೀಯ ಚಿತ್ರದುರ್ಗ 'ಎ", ತೃತೀಯ ಚಿತ್ರದುರ್ಗ 'ಬಿ', ಚತುರ್ಥ ಹೊಳಲ್ಕೆರೆ ಬಾಲಕರ ವಿಭಾಗ ಹ್ಯಾಂಡ್ ಬಾಲ್ ಚಿತ್ರದುರ್ಗ 'ಎ", ಪ್ರಥಮ, ದ್ವಿತೀಯ ಚಿತ್ರದುರ್ಗ 'ಬಿ", ತೃತೀಯ ಹೊಸದುರ್ಗ, ಚತುರ್ಥ ಮೊಳಕಾಲ್ಮೂರುಬಾಲಕಿಯರ ಖೋ ಖೋ ವಿಭಾಗದಲ್ಲಿ ಚಳ್ಳಕೆರೆ ಪ್ರಥಮ, ಹೊಳಲ್ಕೆರೆ ದ್ವಿತೀಯ, ಚಿತ್ರದುರ್ಗ ತೃತೀಯ, ಹೊಸದುರ್ಗ ಚತುರ್ಥಬಾಲಕರ ಖೋ ಖೋ ವಿಭಾಗದಲ್ಲಿ ಮೊಳಕಾಲ್ಮೂರು ಪ್ರಥಮ, ಹೊಳಲ್ಕರೆ 'ಎ' ತಂಡ ದ್ವಿತಿಯ, ಚಳ್ಳಕೆರೆ ತೃತೀಯ, ಹೊಳಲ್ಕೆರೆ 'ಬಿ' ಚತುರ್ಥಬಾಲಕರ ವಾಲಿಬಾಲ್‌ಪ್ರಥಮ–ಶ್ರೀ ಬಸವೇಶ್ವರ ಗ್ರಾಮಾಂತರ ಪ್ರೌಢಶಾಲೆ, ಗೌಡಿಹಳ್ಳಿ, ದ್ವಿತೀಯ–ಮೌಲಾನ್ ಅಜಾದ್ ಮಾಡೆಲ್ ಇಂಗ್ಲೀಷ್ ಮೀಡಿಯಂ ಸ್ಕೂಲ್ ಚಿತ್ರದುರ್ಗ, ತೃತೀಯ–ಕೆ.ಪಿ.ಎಸ್.ಸಿ, ಜಂಪಯ್ಯನಹಟ್ಟಿ.ಚತುರ್ಥ–ಶ್ರೀವಿಶಾಲಾಕ್ಷಿ ಗ್ರಾಮಾಂತರ ಪ್ರೌಢಶಾಲೆ, ಕೋನಸಾಗರ. ಬಾಲಕಿಯರ ವಾಲಿಬಾಲ್

ಪ್ರಥಮ––ಶ್ರೀ ವಿಶಾಲಾಕ್ಷಿ ಗ್ರಾಮಾಂತರ ಪ್ರೌಢಶಾಲೆ, ಕೋನಸಾಗರ, ದ್ವಿತೀಯ –ಸೆಂಟೌನ್ಸ್ ಪ್ರೌಢಶಾಲೆ, ಹಿರಿಯೂರು, ಗೌಡಿಹಳ್ಳಿ, ದ್ವಿತೀಯ–ಮೌಲಾನ್ ಅಜಾದ್ ಮಾಡೆಲ್ ಇಂಗ್ಲೀಷ್ ಮೀಡಿಯಂ ಸ್ಕೂಲ್ ಚಿತ್ರದುರ್ಗ, ತೃತೀಯ–ಎಂ.ಜಿ.ಬೋರನಾಯಕ ಪ್ರೌಢಶಾಲೆ, ಅರೇಹಳ್ಳಿ, ಚತುರ್ಥ–ಸಂತ ಜೋಸೆಫರ ಪ್ರೌಢಶಾಲೆ, ಚಿತ್ರದುರ್ಗ

ಕ್ರಿಕೆಟ್ ದುರ್ಗ ಲಯನ್ಸ್ –ಪ್ರಥಮ, ಹೊಯ್ಸಳ–ದ್ವಿತೀಯ

# ಕುರುಡಿಹಳ್ಳಿ: ಉಚಿತ ಆರೋಗ್ಯ ತಪಾಸಣಾ ಶಿಬಿರ

» ಚಿತ್ರದುರ್ಗ

ಗ್ರಾಮೀಣ ಜನರ ಆರೋಗ್ಯ ಜಾಗೃತಿಗೆ ಆರೋಗ್ಯ ತಪಾಸಣೆ ಶಿಬಿರಗಳು ಅತ್ಯಂತ ಪ್ರಯೋಜನಕಾರಿ ಎಂದು ತಜ್ಞ ವೈದ್ಯರಾದ ಡಾ.ಜಿ.ಸುದರ್ಶನ ಹೇಳಿದರು.

ಚಳ್ಳಕೆರೆ ತಾಲ್ಲೂಕಿನ ಕುರುಡಿಹಳ್ಳಿ ಗ್ರಾಮದ ಈಶ್ವರ ದೇಗುಲದ ಮುಂಭಾಗದಲ್ಲಿ ಭಾನುವಾರ ಬಾಲೇನಹಳ್ಳಿ ಗೇಟ್ ಸಮೀಪದ ಚನ್ನಕೇಶವ ಕ್ಲಿನಿಕ್, ಆರಾಧನ ಮೆಡಿಕಲ್ ಸ್ಟೋರ್ಸ್ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಬಡವರಿಗೆ, ಮಧ್ಯಮ ವರ್ಗದ ಜನತೆಗೆ ವರದಾನವಾಗಿವೆ. ಇಂದಿನ ಒತ್ತಡದ ಜೀವನದಲ್ಲಿ ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದ ಅವರು, ಮುಂದಿನ ದಿನಗಳಲ್ಲಿ ವಿವಿಧ ಕಡೆಗಳಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಆರಾಧನ ಮೆಡಿಕಲ್ಸ್ ಔಷಧ ವಿತರಕ ಬಿ.ಪಿ.ಸಂತೋಷ್ ಕುಮಾರ್ ಮಾತನಾಡಿ, ಆರೋಗ್ಯದಿಂದ ಇದ್ದಲ್ಲಿ ನಾವೆಲ್ಲವನ್ನೂ ಸಾಧಿಸಬಹುದು. ಆರೋಗ್ಯ ವಿಚಾರದಲ್ಲಿ ನಾವು ಎಚ್ಚರವಹಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯ ವಿಚಾರವಾಗಿದೆ ಎಂದು ಹೇಳಿದರು.



ಶಿಬಿರದಲ್ಲಿ ಮಧುಮೇಹ (ಶುಗರ್), ನೆಗಡಿ, ಸಂಧಿವಾತ, ಗ್ಯಾಸ್ಟ್ರಿಕ್, ಕೆಮ್ಮು, ರಕ್ತದೊತ್ತಡ (ಬಿ.ಪಿ), ಪಿತ್ತ, ಮಲಬದ್ಧತೆ, ಜ್ವರ, ಅಲರ್ಜಿ, ಮೈಗ್ರೇನ್ ಸೇರಿದಂತೆ ದಮ್ಮು ಹಾಗೂ ಅಸ್ತಮ ತೊಂದರೆಗೆ ತಪಾಸಣೆ ನಡೆಸಿ ಚಿಕಿತ್ಸೆ ನೀಡಲಾಯಿತು.

# ರುದ್ರಾಕ್ಷಿ ಅರಿವಿನ ಸಂಕೇತ; ಶಿಕ್ಷಕ ಟಿ.ಪಿ.ಉಮೇಶ್



» ಚಿತ್ರದುರ್ಗ

ಜಗದ್ಗುರು ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳ 150 ನೇ ಜಯಂತ್ಯುತ್ಸವ ಹಾಗೂ ಶರಣ ಸಂಸ್ಕೃತಿ ಉತ್ಸವ–2024ರ ಅಂಗವಾಗಿ ಆಯೋಜಿಸಿದ್ದ ವಚನ ಕಮ್ಮಟ ಗೋಷ್ಠಿ–2 ಪಂಚಾಚಾರ ವಿಷಯದ ಬಗ್ಗೆ ನಡೆಯಿತು. ಕಾರ್ಯಕ್ರಮದ ಸಮ್ಮುಖವನ್ನು ಹೆಗ್ಗುಂದದ ಶ್ರೀ ವನಕಲ್ ಮಲ್ಲೇಶ್ವರ ಮಠದ ಡಾ. ಬಸವ ರಮಾನಂದಸ್ವಾಮಿಗಳು ವಹಿಸಿಕೊಂಡಿದ್ದರು. ಕಾರ್ಯಕ್ರಮದಲ್ಲಿ ಪಂಚಾಚಾರಗಳಲ್ಲಿ ಲಿಂಗಾಚಾರ, ಶಿವಾಚಾರ, ಸದಾಚಾರ, ಭೃತಾಚಾರ, ಗಣಾಚಾರ ಗಳ ಬಗ್ಗೆ ವಿಷಯ ಮಂಡನೆ ಮಾಡಲಾಯಿತು. ಪ್ರತಿಯೊಬ್ಬ ಶರಣರ ವಚನಗಳಲ್ಲಿ ಅಂಕಿತವಿದೆ. ಅವರವರ ದೈವವಿದೆ. ಸ್ವತಂತ್ರ ಎಂದರೇನು, ಸಮಾನತೆ ಎಂದರೇನು, ಜಾತ್ಯಾತೀತ ಎಂದರೇನು, ಎಂಬುದನ್ನು ವಚನಗಳು ನಮಗೆ ಕಲಿಸಿಕೊಟ್ಟಿವೆ. ನಮ್ಮ ಮನಸ್ಸನ್ನು ನಿಯಂತ್ರಿಸಿಕೊಂಡು ಮಾನವ ಮಹಾದೇವನಾಗುವ ದಾರಿಯನ್ನು ಶರಣರು ತೋರಿಸಿಕೊಟ್ಟಿದ್ದಾರೆ. ತಾನು ಏನಾಗಬೇಕು ಎಂಬುದನ್ನು ತಿಳಿಸುವುದು ರುದ್ರಾಕ್ಷಿ ವಿಭೂತಿಯಾಗಿದೆ. ನಾಳೆಗಾಗಿ ಕೂಡಿಸುವ ಏಕೈಕ ಜೀವಿ ಮಾನವ ಮಾತ್ರ ಈ ಸಂಗ್ರಹವು ಕೂಡ ಮಹಾಪಾತಕ, ಶರಣ ಧರ್ಮದಲ್ಲಿ ರುದ್ರಾಕ್ಷಿಯು ಅರಿವಿನ ಸಂಕೇತವಾಗಿದೆ ಎಂದು ಅಮೃತಾಪುರದ ಶಿಕ್ಷಕ ಟಿ.ಪಿ.ಉಮೇಶ್ ತಿಳಿಸಿದರು.

## ಪ್ರಮುಖ ಸುದ್ದಿ

# ಭೌತಿಕ ಶ್ರೀಮಂತಿಕೆಗಿಂತ ಹೃದಯ ಶ್ರೀಮಂತಿಕೆ ದೊಡ್ಡದು

» ಚಿತ್ರದುರ್ಗ

ಭೌತಿಕ ಶ್ರೀಮಂತಿಕೆಗಿಂತ ಹೃದಯ ಶ್ರೀಮಂತಿಕೆ ದೊಡ್ಡದು ಎಂದು ದಾವಣಗೆರೆಯ ವಿರಕ್ತಮಠದ ಶ್ರೀ. ಬಸವಪ್ರಭು ಸ್ವಾಮಿಜಿ ತಿಳಿಸಿದರು. ಅವರು ದಿನಾಂಕ 07.10.2024 ರ ಬೆಳಿಗ್ಗೆ 7.00ಗಂಟೆಗೆ ನಡೆದ ಸಹಶಿವಯೋಗ ಪ್ರಾತ್ಯಕ್ಷಿಕೆ ನಡೆಸಿಕೊಟ್ಟು ಮಾತನಾಡುತ್ತಾ, ಮಾನವ ಜೀವನದಲ್ಲಿ ಮೂರು ರೀತಿಯ ಜನರಿದ್ದಾರೆ. ಅದರಲ್ಲಿ ಮೊದಲನೆಯವರು ಅತೃಪ್ತರು, ಎಷ್ಟು ಗಳಿಸಿದರು ಅವರಿಗೆ ತೃಪ್ತಿ ಎಂಬುದು ಇರುವುದಿಲ್ಲ. ಇವರಿಗೆ ಇನ್ನೂ ಬೇಕೇ ಬೇಕು ಎನ್ನುವ ಭಾವನೆ ಸದಾ ಇರುತ್ತದೆ. ಎರಡನೇಯವರು ಅಲ್ಪ ತೃಪ್ತರು, ಇರುವುದರಲ್ಲಿ ಜೀವನ ಮಾಡುವವರು ಇವರು. ಯಾವುದಕ್ಕು ಅತಿ ಆಸೆ ಪಡದೇ ಇದ್ದುದ್ದರಲ್ಲಿ ಬದುಕುವವರು. ಮೂರನೆಯವರು ಸಂತೃಪ್ತರು. ನಿತ್ಯ ತೃಪ್ತರು. ಹಾಗಾದರೇ ಯಾರು ಸಂತೃಪ್ತರು?. 12 ನೇಯ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರ ವ್ಯಕ್ತಿತ್ವವನ್ನು ನೋಡಿ ಇಡೀ ಭಾರತಾದಾಂದ್ಯಂತ ಇರುವ ಶರಣ–ಶರಣೆಯರು ಅನುಭವ ಮಂಟಪ ನೀಡಿದರು. ಇದರಿಂದ ಬಸವಣ್ಣನವರ



ವ್ಯಕ್ತಿತ್ವ ಎಷ್ಟು ದೊಡ್ಡದಿರಬಹುದು ಎಂದು ಅರ್ಥವಾಗುತ್ತದೆ. ಮಾಳಿಗೆಮಾರಯ್ಯನನ್ನು ಪರೀಕ್ಷಿಸಲು ಬಸವಣ್ಣನವರು ಬಂಗಾರದ ನಾಣ್ಯಗಳ ಚೀಲವನ್ನು ಬಿಟ್ಟು ಬಂದಿರುತ್ತಾರೆ. ಅದನ್ನು ನೋಡಿದ ಮಾಳಿಗೆ ಮಾರಯ್ಯ ಇದು ನಮಗೆ ಸೇರಿದ್ದಲ್ಲ ನಮಗೆ ಬೇಡವೇ ಬೇಡ ಎಂದುಕೊಂಡನು. ಶಿವಶರಣರು ನಮ್ಮದಲ್ಲದ ವಸ್ತುಗಳು ಕಸವೆಂದು ಹೇಳಿದ್ದು ನೆನಪಿಸಿಕೊಂಡನು. ನಮ್ಮ ಮನಸ್ಸು ಎಷ್ಟು ಪರಿಪೂರ್ಣವಾಗಿದೆ ಎಂದು ತಿಳಿಯಲು ಬಸವಣ್ಣನವರು ಮಾಡಿದ ಪರೀಕ್ಷೆ ಇದು ಎಂದು ತನ್ನ ಹೆಂಡತಿಗೆ ಹೇಳಿದನು. ಜೀವನದಲ್ಲಿ ಅತೃಪ್ತಿಗಿಂತ, ಅಲ್ಪ ತೃಪ್ತಿಗಿಂತ ಸಂತೃಪ್ತಿಯನ್ನು ಗಳಿಸಬೇಕು. ಬಸವಣ್ಣನವರು ನೀಡಿರುವ ಇಷ್ಟಲಿಂಗದ ಮುಖಾಂತರ ಇಲ್ಲ ಶರಣ–ಶರಣೆಯರು ಸಂತೃಪ್ತಿಯನ್ನು ಗಳಿಸಿದರು. 12ನೇಯ ಶತಮಾನದಲ್ಲಿ ಶರಣರು ಕಲ್ಯಾಣದಲ್ಲಿರುವ ಸಣ್ಣ ಸಣ್ಣ ಗವಿಗಳಲ್ಲಿಯೇ ಜೀವನ ಮಾಡುತ್ತಿದ್ದರು. ದೊಡ್ಡ ದೊಡ್ಡ ಬಂಗಲೆಯಲ್ಲಿ ವಾಸ ಮಾಡುವ ನಮಗೆ ಸಂತೃಪ್ತಿಯಿಲ್ಲ. ಆದರೆ ಶರಣರು ಸಂತೃಪ್ತಿಯ ಬದುಕನ್ನು ನಡೆಸಿದರು. ಅವರ ಪಾಲಿನ ಕಾಯಕ ಮಾಡಿ ದಾಸೋಹ ಮಾಡುತ್ತಿದ್ದರು. ಹೆಚ್ಚಿನ ಸಮಯವನ್ನು ಅನುಭವ ಮಂಟಪದಲ್ಲಿ ಚರ್ಚಾ ಗೋಷ್ಠಿಯಲ್ಲಿ ಕಳೆಯುತ್ತಿದ್ದರು. ಇಷ್ಟಲಿಂಗ ಪೂಜೆ, ಧ್ಯಾನ, ಶಿವಯೋಗ ಮಾಡಿ ಸಂತೃಪ್ತಿ ಪಡೆಯುತ್ತಿದ್ದರು. ಯಾರು ಶಿವಯೋಗವನ್ನು ಮಾಡುತ್ತಾರೋ ಅವರು ಆಸೆಯನ್ನು ಗೆಲ್ಲುತ್ತಾರೆ, ಆಸೆಯನ್ನು ಗೆದ್ದವರೇ ಮಹಾತ್ಮರಾಗುತ್ತಾರೆ, ಶರಣರಾಗುತ್ತಾರೆ. ಯಡಿಯೂರಪ್ಪನವರು ಬಸವಕಲ್ಯಾಣ ಅಭಿವೃದ್ಧಿ ನಿಗಮ ಸ್ಥಾಪಿಸಿ ಕಲ್ಯಾಣದಲ್ಲಿನ ಗವಿಗಳನ್ನು ಅಭಿವೃದ್ಧಿ ಮಾಡಿರುತ್ತಾರೆ. ಯಾರು ಶಿವಯೋಗ ಮಾಡುತ್ತಾರೋ ಅವರ ಜೀವನದಲ್ಲಿ ಸದಾ ನೆಮ್ಮದಿ, ಸಂತೃಪ್ತಿ ನೆಲೆಸಿರುತ್ತದೆ. ಬೇಕೆ ಬೇಕು ಎನ್ನುವ ದುರಾಸೆ ಗೆಲ್ಲಲು ಶಿವಯೋಗ ತುಂಬಾ ಅಗತ್ಯ. ನಾವು ಜೀವನದಲ್ಲಿ ಆಶಾವಾದಿಗಳಾಗಬೇಕು, ಆದರೆ ದುರಾಸೆ ಬೇಡ. ಅದು ಅತೃಪ್ತರನ್ನಾಗಿಸಿ ದುಃಖಿತರನ್ನಾಗಿಸುವುದು. ಎಲ್ಲರೂ ಪ್ರತಿದಿನ ಮನೆಯಲ್ಲಿ 15 ನಿಮಿಷವಾದರೂ ಶಿವಯೋಗ ಮಾಡಬೇಕು. ಶಿವಯೋಗ ನಮ್ಮ ಮನಸ್ಸುಗಳನ್ನು ಅರಳಿಸುತ್ತದೆ, ಬದುಕಿನ ಕಷ್ಟಗಳು ನಿವಾರಣೆಯಾಗುತ್ತವೆ. ಅಂತಹ ಶಕ್ತಿ ಇಷ್ಟಲಿಂಗದಲ್ಲಿದೆ. ಸಂಪತ್ತಿಗಿಂತ ಸಂತೃಪ್ತಿ ದೊಡ್ಡದು ಎಂದು ನುಡಿದರು.

# ನಿರ್ವಾಣ ಸಮಯದಲ್ಲು ಬುದ್ಧಂಗೂ ಕಾಡಿತ್ತು ಕಿಬ್ಬೊಟ್ಟೆ ನೋವು



ತನ್ನದೇಹಮತ್ತುಮನಸ್ಸಿನಮೇಲೆಸಾಕಷ್ಟು ನಿಯಂತ್ರಣ ಹೊಂದಿ, ಆಸೆಗಳನ್ನೆಲ್ಲ ಜಯಿಸಿದ, ಜ್ಞಾನೋದಯವನ್ನು ಹೊಂದಿದ ಗೌತಮ ಬುದ್ಧರಿಗೂ ತಮ್ಮ ಪರಿನಿರ್ವಾಣ ಸಮಯದಲ್ಲಿ ಕಿಬ್ಬೊಟ್ಟೆಯ ನೋವು ಕಾಡುತ್ತಿತ್ತು ಎಂಬ ಮಾತೊಂದಿದೆ. ಅದರ ಅರ್ಥ ಕಷ್ಟಗಳು ಯಾರನ್ನು ಬಿಡುವುದಿಲ್ಲ ಅವು ಬದುಕಿನ, ಪ್ರಕೃತಿಯ, ಸಹಜಕ್ರಿಯೆಗಳು.....

ಇತ್ತೀಚಿನ ಒಂದು ಸುದ್ದಿಯ ಪ್ರಕಾರ ಸದ್ಗುರು ಜಗ್ಗಿ ವಾಸುದೇವ್ ಅವರಿಗೆ ಮೆದುಳಿನಲ್ಲಿ ರಕ್ತಸ್ರಾವವಾಗಿ ಶಸ್ತ್ರಚಿಕಿತ್ಸೆಯಾಗಿದೆ. ಹಾಗೆಯೇ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರಿಗೆ ಮೂರನೆಯ ಬಾರಿಗೆ ಹೃದಯಕವಾಟದ ಶಸ್ತ್ರಚಿಕಿತ್ಸೆಯೂ ಆಯಿತು. ಇಡೀ ವಿಶ್ವದ ಎಲ್ಲಾ ಪ್ರದೇಶಗಳಲ್ಲಿ ಸಹ ಒಂದಲ್ಲ ಒಂದು ರೀತಿಯ ಆರೋಗ್ಯದ ಸಮಸ್ಯೆಗಳು ಅನೇಕ ಜನರನ್ನು ಕಾಡುತ್ತಿರುತ್ತವೆ. ಕೇವಲ ಆರೋಗ್ಯ ಮಾತ್ರವಲ್ಲ ಆರ್ಥಿಕ ಸಮಸ್ಯೆಗಳು, ವಂಚನೆಯ ಸಮಸ್ಯೆಗಳು, ನಂಬಿಕೆ ದ್ರೋಹಗಳು, ಪ್ರೀತಿ ಪ್ರೇಮ ವೈಫಲ್ಯಗಳು, ಯುದ್ಧಗಳು, ಭಯೋತ್ಪಾದಕ ಕೃತ್ಯಗಳು, ಪ್ರಾಕೃತಿಕ ವಿಕೋಪಗಳು ಹೀಗೆ ನಾನಾ ಕಷ್ಟಗಳು, ಸೋಲುಗಳು ಪ್ರತಿಯೊಬ್ಬರನ್ನು ಕಾಡುತ್ತಲೇ ಇರುತ್ತದೆ. ಅದರ ರೂಪಗಳು ಬೇರೆ ಇರಬಹುದಷ್ಟೇ......

ಇದರ ಒಟ್ಟು ಸಾರಾಂಶ ಕಷ್ಟಗಳು ಯಾರಿಗೂ ತಪ್ಪಿದ್ದಲ್ಲ. ಆದರೆ ಅದಕ್ಕೆ ಪ್ರತಿಕ್ರಿಯಿಸುವ ವಿವಿಧ ಮಾರ್ಗಗಳು ವ್ಯಕ್ತಿಯಿಂದ ವ್ಯಕ್ತಿಗೆ ಭಿನ್ನವಾಗಿರುತ್ತದೆ. ಸಾಮಾನ್ಯ ಜನ ಶ್ರೀಮಂತರನ್ನು, ಜನಪ್ರಿಯ ವ್ಯಕ್ತಿಗಳನ್ನು, ದೊಡ್ಡ ಅಧಿಕಾರಸ್ತರನ್ನು, ಧಾರ್ಮಿಕ ನಾಯಕರನ್ನು ಒಂದು ಭ್ರಮಾತ್ಮಕ ಭಾವನೆಯಲ್ಲಿ ನೋಡುತ್ತಿರುತ್ತಾರೆ. ಅವರು ಎಲ್ಲವನ್ನು ಗೆದ್ದವರು. ವಿಶಿಷ್ಟವಾಗಿ, ವಿಶೇಷ ಶಕ್ತಿಯನ್ನು ಹೊಂದಿರುವವರು, ಎಲ್ಲಾ ಕಷ್ಟಗಳಿಂದ ದೂರಾದವರು ಎನ್ನುವ ಒಂದು ಭಾವ ಸಾಮಾನ್ಯ ಜನರಲ್ಲಿ ಇರುತ್ತದೆ. ಆದರೆ ಪ್ರಕೃತಿಗೆ ಇದಾವುದು ತಿಳಿಯುವುದಿಲ್ಲ. ಅದು ಸಹಜವಾಗಿ ತನ್ನ ಕಾರ್ಯ ನಿರ್ವಹಿಸುತ್ತಲೇ ಇರುತ್ತದೆ.......

ಅನೇಕ ಸಾಮಾನ್ಯ ಜನರನ್ನು ಗಮನಿಸಿ. ಅವರು, ಅವರಿಗೆ ಬಂದಿರುವ ಕಷ್ಟಗಳನ್ನೇ ಬಹುದೊಡ್ಡದು ಎನ್ನುವಂತೆ ಭಾವಿಸಿರುತ್ತಾರೆ. ಎಲ್ಲರೂ ಚೆನ್ನಾಗಿದ್ದಾರೆ, ನನಗೆ ಮಾತ್ರ ಇಷ್ಟೊಂದು ಕಷ್ಟ ಬಂದಿದೆ ಎಂದು ಇತರರನ್ನು ನೋಡುತ್ತಾ, ಒಳಗೊಳಗೆ ಮತ್ತಷ್ಟು ಸಂಕಷ್ಟ ಪಡುತ್ತಾರೆ. ತಮ್ಮ ದುರಾದೃಷ್ಟಕ್ಕೆ ಹಳಿಯುತ್ತಾರೆ...

ಖಾಯಿಲೆಯ,ಹಣಕಾಸಿನವಂಚನೆಯ,ಪ್ರೀತಿಯ ನಿರಾಕರಣೆಯ ಒಟ್ಟಿನಲ್ಲಿ ತಮಗಾಗಿರುವುದೇ ಹೆಚ್ಚು ಎಂಬ ಹೋಲಿಕೆಯ ಭಾವನೆ ಅವರಲ್ಲಿ ಖಿನ್ನತೆಯನ್ನು ಉಂಟುಮಾಡುತ್ತದೆ. ಆ ನಿರಾಶೆಯ ಭಾವ ಒಳ್ಳೆಯದಲ್ಲ. ಈ ಸೃಷ್ಟಿಯಲ್ಲಿ ಮನುಷ್ಯರು ಮಾತ್ರವಲ್ಲ ಅನೇಕ ಜೀವರಾಶಿಗಳು ಸಹ ಇದೆ. ಅವುಗಳು ಪ್ರಕೃತಿಯೊಂದಿಗೆ ಪ್ರತಿಕ್ಷಣ ಸಂಘರ್ಷ



ಮಾಡುತ್ತಲೇ ಬದುಕುತ್ತಿರುತ್ತವೆ. ಒಂದು ಪ್ರಾಣಿ ಇನ್ನೊಂದು ಪ್ರಾಣಿಯನ್ನು ತಿಂದೇ ಜೀವಿಸುತ್ತದೆ......

ಪ್ರಾಕೃತಿಕ ವಿಕೋಪಗಳು ಸಹ ಮನುಷ್ಯನನ್ನು ನಿರಂತರವಾಗಿ ಕಾಡುತ್ತಿರುತ್ತದೆ. ಅದರ ಜೊತೆಗೆ ಸಾಮಾಜಿಕ ವ್ಯವಸ್ಥೆ ಅನೇಕ ಸವಾಲುಗಳನ್ನು ಒಡ್ಡುತ್ತದೆ. ಯುದ್ಧ, ಭಯೋತ್ಪಾದನೆ, ಅಪಘಾತಗಳು ಅನೇಕ ರೀತಿಯ ಒಡೆದಾಟಗಳು, ಎಲ್ಲವನ್ನು ಸಹ ಸಮಾಜ ನಿರಂತರವಾಗಿ ಅನುಭವಿಸುತ್ತದೆ. ಆ ಸಂದರ್ಭದಲ್ಲಿ ಯಾವ ಪ್ರದೇಶದಲ್ಲಿ ನಾವು ವಾಸಿಸುತ್ತಿರುವೆಯೋ ಅದರ ಪರಿಣಾಮವನ್ನು ನಾವು ಅನುಭವಿಸಲೇಬೇಕು. ಉಕ್ರೇನಿನ್ನಲ್ಲಿರಲಿ, ಪ್ಯಾಲೆಸ್ಟೈನ್ ನಲ್ಲಿರಲಿ, ಸಿರಿಯಾದಲ್ಲಿರಲಿ, ಆಫ್ಘಾನಿಸ್ತಾನದಲ್ಲಿರಲಿ, ಸುಡಾನ್ ನಲ್ಲಿರಲಿ, ಸ್ವಿಟ್ಜರ್ಲ್ಯಾಂಡ್ ನಿಲ್ಲಿರಲಿ, ನಾರ್ವೆಯಲ್ಲಿರಲಿ, ಅಮೆರಿಕದಲ್ಲಿರಲಿ, ಭಾರತದಲ್ಲಿರಲಿ, ನಮ್ಮ ಹುಟ್ಟು, ನಮ್ಮ ಬೆಳವಣಿಗೆ, ನಮ್ಮ ಅವಶ್ಯಕತೆ, ನಮ್ಮ ಅನಿವಾರ್ಯತೆ, ಎಲ್ಲೆಲ್ಲಿ ಏನೇನಿದೆಯೋ ಅದು ನಮಗೆ ಅನ್ವಯಿಸಿ ಅನುಭವ ಕೊಡುತ್ತದೆ.......

ಇಷ್ಟೇ ಅಲ್ಲ, ಪ್ರತಿ ಕಷ್ಟ ಸುಖಗಳು, ಕ್ರಿಯೆ ಪ್ರತಿಕ್ರಿಯೆಗಳು, ಅದೃಷ್ಟ ದುರಾದೃಷ್ಟಗಳು, ಪ್ರತಿ ವ್ಯಕ್ತಿಯಿಂದ ವ್ಯಕ್ತಿಗೆ ಭಿನ್ನವಾಗಿರುತ್ತದೆ. ಈ ತಿಳುವಳಿಕೆ ನಮಗೆ ಮೂಡಿದಾಗ ನಮ್ಮ ಕಷ್ಟಗಳು ಸಹಜವೇ ಅನಿಸುತ್ತದೆ. ಹೋಲಿಕೆಗಳು ಕಡಿಮೆಯಾಗುತ್ತದೆ......

ಒಮ್ಮೆ ನೀವು ಈ ಅಗಾಧವಾದ ಸೃಷ್ಟಿಯಲ್ಲಿ ನಾವು ಒಂದು ಸಣ್ಣ ಅಣುವಿನ ಕಣ ಜೊತೆಗೆ ಸೃಷ್ಟಿಯ ಶಿಶು ಎಂದು ಭಾವಿಸಿದಾಗ ಇಲ್ಲಿನ ಎಲ್ಲಾ ಪರಿಸ್ಥಿತಿಯು ನಮ್ಮ ಮೇಲೆ ಪರಿಣಾಮ ಬೀರುತ್ತದೆ. ಅದರಲ್ಲಿ ಅತ್ಯುತ್ತಮ, ಸುಂದರ ಕ್ಷಣಗಳ ಜೊತೆಗೆ ಕಷ್ಟಗಳು ಸೇರಿ ಎಲ್ಲವೂ ಇರುತ್ತದೆ. ಅದರೊಂದಿಗೆ ಸಂಘರ್ಷ ಮತ್ತು ಪರಿಣಾಮವನ್ನು ಸ್ವೀಕರಿಸುವುದಷ್ಟೇ ನಮ್ಮ ಕರ್ತವ್ಯ. ಹಿಂದಿನ ಅನೇಕ ಐತಿಹಾಸಿಕ ಘಟನೆಗಳನ್ನು ಗಮನಿಸಿದಾಗ ಈಗ ನಾವಿರುವ ಪರಿಸ್ಥಿತಿಯೇ ಎಷ್ಟೋ ಉತ್ತಮ ಎಂಬ ತೃಪ್ತಿಕರ, ಸಮಾಧಾನಕರ ಮನಸ್ಥಿತಿ ನಮ್ಮದಾದರೆ, ನೆಮ್ಮದಿಯ ಗುಣಮಟ್ಟ, ಸಂತೋಷದ ಕ್ಷಣಗಳು ಹೆಚ್ಚಾಗಬಹುದು. ಕಷ್ಟಗಳ ತೀವ್ರತೆ, ಮನದೊಳಗಿನ ಕೊರಗು ಕಡಿಮೆಯಾಗಬಹುದು.....

ಏಕೆಂದರೆ ಇತ್ತೀಚಿನ ದಿನಗಳಲ್ಲಿ ಸಾಕಷ್ಟು ನಿರಾಶಾವಾದ, ವೈರಾಗ್ಯ ಸಾಮಾನ್ಯ ಜನರಲ್ಲಿ, ಸಾಮಾನ್ಯ ವಯಸ್ಸಿನಲ್ಲಿಯೇ ಕಾಡುತ್ತಿದೆ. ಅನೇಕರು ಅದನ್ನು ವ್ಯಕ್ತಪಡಿಸುತ್ತಲೂ ಇದ್ದಾರೆ. ಆದ್ದರಿಂದ ಎಲ್ಲರಲ್ಲೂ ಜೀವನೋತ್ಸಾಹ ಮತ್ತೆ ಪುಟಿದೇಳಲಿ ಎಂದು ಆಶಿಸುತ್ತಾ........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,

» **ವಿವೇಕಾನಂದ. ಎಚ್. ಕೆ.**
**9844013068.......**

## ಭಾರತ ದೇಶ ಆಧ್ಯಾತ್ಮಿಕವಾದ ತವರೂರು

» **ಚಿತ್ರದುರ್ಗ**

ದಿ.06–10–2024 ರ ಸಂಜೆ 6 ಗಂಟೆಗೆ ಯೋಗ ಆಧ್ಯಾತ್ಮ ಆರೋಗ್ಯ ಶಿಬಿರದಲ್ಲಿ ವೈದ್ಯಶ್ರೀ ಯೋಗ ಗುರು ಚನ್ನಬಸವಣ್ಣ ಮಾತನಾಡಿ ಭಾರತ ದೇಶ ಆಧ್ಯಾತ್ಮಿಕವಾದ ತವರೂರು, ಆಧ್ಯಾತ್ಮ ಕೇವಲ ಕಥೆಯಲ್ಲ ಅದು ಪ್ರಾಯೋಗಿಕ, ಅನ್ನದಾಸೋಹ, ಅರಿವಿನ ದಾಸೋಹವನ್ನು ನೀಡಿದ ಕೀರ್ತಿ ಶ್ರೀ ಜಯದೇವ ಜಗದ್ಗುರುಗಳಿಗೆ ಸಲ್ಲುತ್ತದೆ. ಮಹಾತ್ಮರಿಗೆ ಮರಣವಿಲ್ಲ ಅಂತವರ ಸಾಲಿನಲ್ಲಿ ಶ್ರೀ ಜಯದೇವ ಜಗದ್ಗುರುಗಳು ಸೇರುತ್ತಾರೆಂದು ತಿಳಿಸಿದರು.



ರಾವಂದೂರಿನ ಮೋಕ್ಷಪತಿ ಮಹಾಸ್ವಾಮಿಗಳು ಮಾತನಾಡಿ ಶ್ರೀ ಜಯದೇವ ಜಗದ್ಗುರುಗಳು ಅವರು ನಾಡಿನಾಂದ್ಯತ ಶಾಖಾ ಮಠಗಳನ್ನು ಜೀರ್ಣೋದ್ಧಾರ ಮಾಡಿದಲ್ಲದೆ ಮತ್ತು ಶೈಕ್ಷಣಿಕ ಸಂಸ್ಥೆಗಳು ವಸತಿ ನಿಲಯ ಕಟ್ಟಿಸಿದರು. ಬಸವಣ್ಣನವರ ವಚನಗಳನ್ನು ತಮ್ಮ ಆಚಾರ ವಿಚಾರಗಳನ್ನು ನಡೆ ನುಡಿಗಳಲ್ಲಿ ಅಳವಡಿಸಿದಕೊಂಡು ಮುರುಘಾ ಪರಂಪರೆಯನ್ನು ಬೆಳೆಸಿದವರು ಎಂದು ತಿಳಿಸಿದರು.

ಸಿರಸಂಗಿ ಮುರುಘಾಮಠದ ಶ್ರೀ ಬಸವಮಹಾಂತಸ್ವಾಮಿಗಳು ಮಾತನಾಡಿ ಇಂದಿನ ಸಮಾಜದಲ್ಲಿ ನಾವುಗಳು ಟಿ ವಿ ಮೊಬೈಲ್‌ಗೆ ಹೊಂದಿಕೊಂಡಿದ್ದೇವೆ, ನಮ್ಮ ಸಂಸ್ಕರವನ್ನೇ ಮರೆತಿದ್ದೇವೆ. ಆದ್ದರಿಂದ ಶರಣ ವಿಚಾರಗಳನ್ನು ತಿಳಿದುಕೊಳ್ಳುವುದು ಅವಶ್ಯಕವಾಗಿದೆ ಎಂದರು.

ಹಿರಿಯ ಇತಿಹಾಸ ಸಂಶೋಧಕರಾದ ಡಾ.ಲಕ್ಷ್ಮಣ ತೆಲಗಾವಿ ಮಾತನಾಡಿ ಕೆಳೆದ 50 ವರ್ಷಗಳಿಂದ ಮುರುಘಾ ಪರಂಪರೆಯನ್ನು ಕಂಡಿದ್ದೇನೆ. ಶ್ರೀ ಜಯದೇವ ಜಗದ್ಗುರುಗಳ 100 ವರ್ಷದ ಕಾರ್ಯಕ್ರಮ ಅದ್ದೂರಿಯಾಗಿ ನಡೆದಿರುವುದನ್ನ ನೋಡಿದ್ದೇನೆ. ಶ್ರೀ ಮಠದಲ್ಲಿನ ತಾಳೆಗರಿಗಳ ಮುಖಾಂತರ ಶ್ರೀ ಮಠದ ಪರಂಪರೆಯನ್ನು ಬೇಳಕಿಗೆ ತಂದವರು ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಎಂದರು.

ಮೌಢ್ಯ ಆಚರಣೆಗಳ ವಿರೋಧಿ ಹೋರಟಗಾರ ಶ್ರೀ ಹುಲಿಕಲ್ ನಟರಾಜ್ ಮಾತನಾಡಿ, ಇಂದು ಬಸವ ತತ್ವ ಮತ್ತು ಶರಣರ ವಿಚಾರಗಳನ್ನು ಕೆಲವ ಅಧ್ಯಾಯನಕ್ಕೆ ಮಾತ್ರ ಬಳಸಿಕೊಂಡಿದ್ದೇವೆ, ಅದರೆ ಆಚರಣೆಗೆ ತಂದಿಲ್ಲ, ನಾವು ಶರಣರ ನಿಜವಾದ ಅನುಯಾಯಿಗಳಾಗ ಬೇಕದರೆ ಜೀವನದಲ್ಲಿ ಅಳವಡಿಸಿಕೊಂಡಗ ಮಾತ್ರ ಸಾಧ್ಯ ಎಂದರು.

ಶ್ರೀ ಗುರುಬಸವ ಮಹಾಸ್ವಾಮಿಗಳು ಮಾತನಾಡಿ ಭಕ್ತಿಯೆಂಬದು ಬಹಳ ದೊಡ್ಡ ಸಂಪತ್ತು. ಆರೋಗ್ಯ ಸಂಪತ್ತು, ಧನ ಸಂಪತ್ತುಗಿಂತ ಭಕ್ತಿ ಸಂಪತ್ತು ಬಹಳ ಮುಖ್ಯ ಎಂದರು.

ಕಾರ್ಯಕ್ರಮದಲ್ಲಿ ಮೆದೆಹಳ್ಳಿಯ ಬಸವರಾಜ ಮಾತನಾಡಿ ಬಡ ರೋಗಿಗಳಿಗೆ ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಯಲ್ಲಿ ಸರ್ಕಾರದ ಸಚಿವರ ಸಹಕಾರದಿಂದ "ಜಯದೇವ ಕಾಡಿಯಾಲಜಿಸ್ಟ್" ವಿಭಾಗವನ್ನು ಸ್ಥಾಪಿಸಿದವರು ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಎಂದರು.

## ಜ್ಞಾನದ ಅರಿವು ಪ್ರತಿಯೊಬ್ಬರು ರೂಪಿಸಿಕೊಳ್ಳಬೇಕು

» **ಚಿತ್ರದುರ್ಗ**

ಛಲವಾದಿಗುರುಪೀಠದಶ್ರೀಬಸವನಾಗಿ ದೇವ ಸ್ವಾಮಿಗಳು ಮಾತನಾಡಿ ಗುರು ಲಿಂಗ ವಿಭೂತಿ ಜಂಗಮ ಪದಗಳ ಬಳಕೆ ಅಮೋಘವಾದ ಪದದ ಬಳಕೆಯಾಗಿದೆ. ಶಿವ ಯೋಗ ವಚನಗೋಷ್ಠಿ ಕೇವಲ ಕೆಲವೇ ವ್ಯಕ್ತಿಗಳಿಗೆ ಸಿಮಿತವಾಗದೆ ಎಲ್ಲ ವ್ಯಕ್ತಿಗಳಿಗೂ ಇದೂ ದೊರೆಯಬೇಕು. ಲಿಂಗದ ಶಕ್ತಿ, ಪ್ರಸಾದ, ಪಾದೋದಕದ ಶಕ್ತಿ ಎಲ್ಲರಿಗೂ ತಿಳಿಯವಂತಹದಗಲಿ. ಗುರು ಎಂದರೆ ದೇಹ ಅರ್ಪಿಸಬೇಕು, ಲಿಂಗ ಎಂದರೆ ಮನ: ಎಂದ ಅರ್ಥ, ಜಂಗಮ ಎಂದರೆ ಪ್ರಾಣ ಎಂದು ಅರ್ಥ. ಇವು ಎಲ್ಲವೂಗಳನ್ನು ಅರ್ಥ ಮಾಡಿಕೊಳ್ಳುವನೇ ವ್ಯಕ್ತಿ. ಜ್ಞಾನದ ಅರಿವು ಪ್ರತಿಯೊಬ್ಬರು ರೂಪಿಸಿಕೊಳ್ಳಬೇಕು ಇವುಗಳನ್ನು ಬಳಸಿಕೊಂಡಗ ಮಾತ್ರ ತತ್ವಜ್ಞಾನಿಗಳಗುತ್ತೇವೆ. ಶಿವಪತ ಸಂಪದಿಸಿವುದಕ್ಕೆ ಎಂಟು ಅವರಣಗಳನ್ನು ಕಾಣುತ್ತೇವೆ, ಇವಗಳನ್ನು ಸಂಪಾದಿಸಬೇಕಾದರೆ ವ್ಯಕ್ತಿಗಳಲ್ಲಿ ಆಧ್ಯಾತ್ಮೀಕ ಜ್ಞಾನದ ಅರಿವು ಮುಖ್ಯ ಎಂದು ನುಡಿದರು.



ಬೆಂಗಳೂರಿನ ಪ್ರಾಂಶುಪಾಲರಾದ ಶೀಲಾದೇವಿ ಮಳಿಮಟ್ ಮಾತನಾಡಿ ಪಾದೋದಕ ವೆಂಬದು ಪರಮಾತ್ಮನ ಚಿದ್ರೂಪ, ಪಾದೋದಕ ವೆಂಬದು ವೈಜ್ಞಾನಿಕವಾಗಿ ತೆಗೆದುಕೊಳ್ಳಬಹುದು, ಆಧ್ಯಾತ್ಮಿಕವಾಗಿಯೂ ಪಾದೋದಕವನ್ನು ಗಳಿಸಬಹುದು. ಪಾದೋದಕ ಪವಿತ್ರತೆಯ ಸಂಕೇತ, ಉದಕ ಜಲತತ್ವದ ಸಂಕೇತ, ಪಾದೋದಕ ಎಂಬುದು ಲಿಂಗದ ಮೇಲೆ ಹಾಕಿರುವ ನೀರಿನ ಹನಿ ನಮ್ಮ ತಲೆಯ ಮೇಲಿನ ಪೀನಲ್ ಗ್ರಂಥಿ, ಮೆಲಟಾನ್ ಎಂಬ ಗ್ರಂಥಿಯ ಮೂಲಕ ನಮ್ಮನ್ನು ರಕ್ಷಿಸುತ್ತದೆ. ಪಾದೋದಕದ ಅರ್ಥ ನಮಗೆ ಗೊತ್ತಿರದೆ ಇದ್ದಾಗ ನಾವು ಖಿನ್ನತೆಗೆ ಹೋಗುತ್ತೇವೆ. ಇದರಿಂದ ನಾವು ಹೊರಗೆ ಬರಬೇಕೆಂದರೆ ಪಾದೋದಕದ ಕ್ರಿಯೇ ನಮಗೆ ಗೊತ್ತಿರಬೇಕು. ಪಾದೋದಕದ ಮೂಲಕ ನಮಗೆ ಗೊತ್ತಾಗದೆ ಹಾರ್ಮೋನ್‌ಗಳು ಸೃಷ್ಟಿಯಾಗುತ್ತವೆ. ನಾವು ಪಾದೋದಕವನ್ನು ನಮ್ಮಲ್ಲಿರುವ ಅಂತರಂಗ ಬಹಿರಂಗದ ಶುದ್ಧಿಗೆ ಬಳಸಬೇಕು. ಪಾದೋದಕ ಯಾರ ಅನುಭವಕ್ಕೆ ಬರುತ್ತದೆಯೋ ಅವರನ್ನು ಸ್ಮೃತಿ ಎಂದು ಯಾರ ಅನುಭವಕ್ಕೆ ಬರುವುದಿಲ್ಲವೋ ಅವರನ್ನು ಅಗೋಚರ ಎಂದು ಕರೆಯುತ್ತೇವೆ. ಪಾದೋದಕ ಕೇವಲ ನೀರಲ್ಲ ಅದು ಅಮೃತ, ಇದು ಜ್ಞಾನಿಗಳಿಗೆ ಹಾಗೂ ಆಧ್ಯಾತ್ಮಾತ ವ್ಯಕ್ತಿ ಪಡೆಯಲು ಸಾಧ್ಯ. ಸರಿಯಾದ ಆಚಾರದ ಮೂಲಕ ಪಾದೋದಕ ಮಾಡಿದರೆ ಜ್ಞಾನ ಸಿಗುರುವುದು ಎಂದು ನುಡಿದರು.

ಬೆಂಗಳೂರಿನ ನಿವೃತ್ತ ಪ್ರಾಂಶುಪಾಲರಾದ ಸಿ ಕೆ ಜಗಧೀಶ ಮಾತನಾಡಿ ಪ್ರಸಾದ ಮೂರು ಆಯಾಮಗಳನ್ನು ತಿಳಿಸಿದರು, ಪ್ರಸಾದ ನಾವು ಸೇವಿಸಿತ್ತಿರು ಆಹಾರವಲ್ಲ, ವಚನಕಾರರು ಹೇಳುವಂತೆ, ಪೂರ್ಣವಾಗಿರುವ ಶಬ್ದ ರಸ, ರೂಪ, ಗಂಧ. ಈ ವಿಶ್ವವನ್ನು ಜಂಗಮವೆಂದು ಕರೆದರು. ಸುಬುದ್ಧಿಯೆಂಬ ಜ್ಞಾನದ ಮೂಲಕ ಅಂತರಂಗದಲ್ಲಿ ಅರ್ಥಸಿ ಅದನ್ನು ಗುರುಲಿಂಗಕ್ಕೆ ಅರ್ಪಿಸಬೇಕು. ಯಾವ ವ್ಯಕ್ತಿ ಕಷ್ಟ–ಸುಖ ನೆಮ್ಮದಿ ವಿಚಾರಗಳನ್ನು ಹೊಂದಿರುತ್ತಾನೊ ಅದನ್ನೆ ಶಿವ ಕೊಟ್ಟ ಪ್ರಸಾದ ಎನ್ನುವರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T